ಸಂಪುಟ : 9 ಸಂಚಿಕೆ 154 ಪುಟ : 4 ಬೆಲೆ: 3.00 ಬುಧವಾರ ಜುಲೈ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 154 Pages : 4 Price : 3.00 Wednesday July 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 'ವಿಕಸಿತ ಭಾರತ' ಎಂಬ ಹುಸಿ ಕಲ್ಪನೆಯನ್ನು ಅನಾವರಣಗೊಳಿಸಿದ ಬಜೆಟ್: ಸಚಿವ ಎಚ್.ಕೆ. ಪಾಟೀಲ

## ಕೇಂದ್ರದ ಬಜೆಟ್ ನಿರಾಸೆ ಮೂಡಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ



ನಿರುದ್ಯೋಗ, ಬಡತನ ನಿರ್ಮೂಲನೆಯಂತಹ ಆದ್ಯತಾ ವಲಯಗಳ ಕಡೆಗೆ ಗಮನ ನೀಡದ ಕೇಂದ್ರ ಸರ್ಕಾರದ ಬಜೆಟ್ ಭಾರತೀಯ ಮಾನವ ಸಂಪನ್ಮೂಲದ ಸದ್ಬಳಕೆಗೆ ಯಾವುದೇ ಕಾರ್ಯಕ್ರಮ ರೂಪಿಸದೇ ಕೇವಲ ಅಂಕಿ-ಸಂಖ್ಯೆಗಳ ಮೂಲಕ ಗೊಂದಲ ಸೃಷ್ಟಿಸಿ, ನಿರಾಸೆ ಮೂಡಿಸಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 'ವಿಕಸಿತ ಭಾರತ' ಎಂಬ ಹುಸಿ ಕಲ್ಪನೆಯನ್ನು ಅನಾವರಣಗೊಳಿಸಿರುವ ಕೇಂದ್ರದ ಬಜೆಟ್ ಐದು ವರ್ಷಗಳ ಅವಧಿಯಲ್ಲಿ 135 ಕೋಟಿ ಭಾರತೀಯ ಜನಸಂಖ್ಯೆಯ ಪೈಕಿ 20 ಲಕ್ಷ ಯುವಕರಿಗೆ ಕೌಶಲ್ಯ ತರಬೇತಿಯನ್ನು ನೀಡುವ ಬಗ್ಗೆ ಪ್ರಸ್ತಾಪಿಸಿರುವುದು ಹಾಸ್ಯಾಸ್ಪದವಾಗಿದೆ. 7.50 ಲಕ್ಷ ರೂ. ಸಾಲ ನೀಡುವ ಕಲ್ಪನೆ ಕೇವಲ ಕಲ್ಪನೆಯಾಗಿಯೇ ಉಳಿಯಲಿದೆ. ಏಕೆಂದರೆ ಇಲ್ಲಿಯವರೆಗೂ ಬ್ಯಾಂಕ್‌ಗಳು ನಿರುದ್ಯೋಗಿಗಳಿಗೆ ಭದ್ರತೆ ರಹಿತ ಸಾಲವನ್ನೇ ನೀಡಿಲ್ಲ. ಇದರಿಂದಾಗಿ ಇಂತಹ ಯೋಜನೆಗಳು ಕೇವಲ ಕಣ್ಣೊರೆಸುವ ತಂತ್ರಗಳಾಗಿವೆ.

ಆಂಧ್ರಪ್ರದೇಶ ಮತ್ತು ಬಿಹಾರ ರಾಜ್ಯಗಳಿಗೆ ವಿಶೇಷ ಕೊಡುಗೆ ನೀಡಿರುವ ಕೇಂದ್ರ ಸರ್ಕಾರ ಕರ್ನಾಟಕವೂ ಸೇರಿದಂತೆ ದಕ್ಷಿಣ ಭಾರತದ ಇತರ ರಾಜ್ಯಗಳನ್ನು ಕಡೆಗಣಿಸಿದೆ. ರಾಷ್ಟ್ರೀಯ ಸಹಕಾರ ನೀತಿಯನ್ನು ಜಾರಿಗೆ ತರುವ ಬಗ್ಗೆ ಪ್ರಸ್ತಾಪಿಸಿರುವ ಹಣಕಾಸು ಸಚಿವರು ಸಹಕಾರಿ ರಂಗದ ಬ್ಯಾಂಕ್‌ಗಳು ಮತ್ತು ಇತರ ಪತ್ತಿನ ಸಹಕಾರಿ ಸಂಘಗಳ ಕಾರ್ಯನಿರ್ವಹಣೆಗೆ ಅಡೆತಡೆ ತರುವ ಕೆಲವು ಕೇಂದ್ರದ ನೀತಿಗಳ ಕುರಿತು ಯಾವುದೇ ಪ್ರಸ್ತಾಪ ಮಾಡಿಲ್ಲ.

'ಪ್ರಧಾನ ಮಂತ್ರಿ ನಗರ ಆವಾಸ್ ಯೋಜನೆ-2' 1 ಕೋಟಿ ನಗರ ಪ್ರದೇಶದ ಬಡವರು ಮತ್ತು ಮಧ್ಯಮ ವರ್ಗದ ಕುಟುಂಬದವರಿಗೆ ವಸತಿ ಯೋಜನೆ ಒದಗಿಸುವ ಉದ್ದೇಶಕ್ಕಾಗಿ 10 ಲಕ್ಷ ಕೋಟಿ ರೂಪಾಯಿಗಳನ್ನು ಒದಗಿಸಿರುವುದಾಗಿ ಹೇಳಿದೆ. ಆದರೆ ಪ್ರಧಾನ ಮಂತ್ರಿ ನಗರ ಆವಾಸ್ ಯೋಜನೆ-1ರ 2 ಕೋಟಿ ಮನೆಗಳನ್ನು ಒದಗಿಸುವ ಯೋಜನೆ ಕಾರ್ಯಗತಗೊಂಡಿಲ್ಲ.

ಕೇಂದ್ರ ಸರ್ಕಾರದ ಈ ಮುಂಗಡ ಪತ್ರವು ಕೇವಲ ಶ್ರೀಮಂತರು, ಮೇಲ್ಮಧ್ಯಮ ವರ್ಗದವರ ಅವಶ್ಯಕತೆಗಳನ್ನು ಪೂರೈಸುವತ್ತ ಹೆಚ್ಚು ಗಮನಹರಿಸಿದ್ದು, ಬಡವರು, ಹಿಂದುಳಿದ ವರ್ಗದವರು, ಪರಿಶಿಷ್ಟ ಜಾತಿ ಮತ್ತು ಜನಾಂಗದ ಹಾಗೂ ಬುಡಕಟ್ಟು ಜನಾಂಗ, ಅಲ್ಪಸಂಖ್ಯಾತರ, ಅವಕಾಶ ವಂಚಿತ ಜನರ ಕಲ್ಯಾಣಕ್ಕಾಗಿ ಪರಿಣಾಮಕಾರಿಯಾದ ಯಾವುದೇ ಯೋಜನೆಗಳನ್ನು ಜಾರಿಗೆ ತಂದಿಲ್ಲ.

ನಿರುದ್ಯೋಗಿಗಳಿಗೆ ಅಪ್ರೆಂಟಿಶಿಪ್ ಭತ್ಯೆಯೊಂದಿಗೆ ಯಥಾವತ್ತಾಗಿ ಕಾಂಗ್ರೆಸ್ ಕಾರ್ಯಕ್ರಮವನ್ನು ಜಾರಿಗೆ ತಂದಿರುವುದು ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯ ಭರವಸೆಯ ಪರಿಣಾಮಕಾರಿ ಯೋಜನೆಯನ್ನು ಅತ್ಯಂತ ವ್ಯಾಪಕವಾಗಿ ಬಿಂಬಿಸಿರುವುದಕ್ಕೆ ಅಭಿನಂದಿಸುವೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ.

ಯಾವುದೇ ದೂರದೃಷ್ಟಿಯಿಲ್ಲದ ಪುರೋಗಾಮಿಯಾಗಿರದ ಈ ಮುಂಗಡ ಪತ್ರ ರಾಷ್ಟ್ರದ ಜನತೆಗೆ ಸಂಪೂರ್ಣವಾಗಿ ಮೋಸಗೊಳಿಸಿದೆ. ಆದರೆ, ಈ ಮುಂಗಡ ಪತ್ರದ ಭಾಷಣದಲ್ಲಿ ಅರ್ಥ ಸಚಿವೆ ನಿರ್ಮಲಾ ಸೀತಾರಾಮನ್‌ರವರು ಲೋಕಸಭೆ ಚುನಾವಣಾ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯ ಪುಟ 30ರಲ್ಲಿ ವಿವರಿಸಿರುವ ಉದ್ಯೋಗಕ್ಕೆ ಉತ್ತೇಜನ ನೀಡುವ ವಿಷಯವನ್ನು ಬಜೆಟ್‌ನಲ್ಲಿ ಅಳವಡಿಸಿಕೊಂಡಿರುವುದಕ್ಕೆ ನನಗೆ ಸಂತಸವಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ.

### ಹಮ್ಮಿಗಿ ಬ್ಯಾರೇಜ್ ಹಿನ್ನೀರು ಪ್ರದೇಶಗಳಿಗೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಭೇಟಿ

# ಸುರಕ್ಷತೆಗೆ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ತುಂಗಭದ್ರಾ ನದಿಯ ನೀರಿನ ಹರಿವು ಅಧಿಕವಾಗುತ್ತಿರುವ ಹಿನ್ನೆಲೆಯಲ್ಲಿ ಮಂಗಳವಾರ ಜಿಲ್ಲೆಯ ಹಮ್ಮಿಗಿ ಬ್ಯಾರೇಜ್ ಹಿನ್ನೀರು ಪ್ರದೇಶಗಳಿಗೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಹಮ್ಮಿಗಿ, ವಿಠಲಾಪುರ, ಗುಮ್ಮಗೋಳ, ಬೀದರಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ, ನದಿ ಪಾತ್ರದ ಸಾರ್ವಜನಿಕರು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಗೊಳ್ಳಬೇಕು. ಯಾವುದೇ ರೀತಿಯ ಜನ, ಜಾನುವಾರು ಜೀವ ಹಾನಿಯಾಗದಂತೆ ನಿಗಾವಹಿಸಿ, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸ್ಥಳೀಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನದಿಯ ಹತ್ತಿರ ಮಕ್ಕಳು, ಜಾನುವಾರುಗಳು ತೆರಳದಂತೆ ಜಾಗೃತಿ ಮೂಡಿಸಿ, ಸಾರ್ವಜನಿಕರ ಆಸ್ತಿ ಹಾನಿಯಾಗದಂತೆ ರಕ್ಷಿಸಿಕೊಳ್ಳಲು ತಿಳಿಸಬೇಕು ಎಂದರು ಸೂಚಿಸಿದರು.

ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರೊಂದಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಉಪಸ್ಥಿತರಿದ್ದು, ಸ್ಥಳೀಯ ಅಧಿಕಾರಿಗಳಿಗೆ ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು.

ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಯಲ್ಲಿ ವಾಸಿಸುವವರು ಸುರಕ್ಷತೆಗೆ ಆದ್ಯತೆ ವಹಿಸಬೇಕು. ವಿದ್ಯುತ್ ಕಂಬ, ತಂತಿಗಳಿಗೆ ಜಾನುವಾರುಗಳನ್ನು ಕಟ್ಟಬಾರದು ಹಾಗೂ ಸಾರ್ವಜನಿಕರು ವಿದ್ಯುತ್ ಕಂಬ ಅಥವಾ ತಂತಿಗಳನ್ನು ಸ್ಪರ್ಶಿಸಬಾರದು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸಾರ್ವಜನಿಕರಿಗೆ ಸೂಚನೆ ನೀಡಿದರು.

ಈ ವೇಳೆ ಮುಂಡರಗಿ ತಹಸೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಪೊಲೀಸ್ ಇನ್ಸ್‌ಪೆಕ್ಟರ್, ಸಿಂಗಟಾಲೂರ ಏತ ನೀರಾವರಿ ಕಾರ್ಯಪಾಲಕ ಅಭಿಯಂತರರು ಹಾಗೂ ಸಾರ್ವಜನಿಕರು ಹಾಜರಿದ್ದರು.





### ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಪತ್ರಿಕಾಗೋಷ್ಠಿಯಲ್ಲಿ ಹನುಮಂತಪ್ಪ ದೊಡ್ಡಮನಿ

# ರಾಜ್ಯ ಸರಕಾರ ಎಸ್‌ಸಿ/ಎಸ್‌ಟಿ ವಿರೋಧಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರ ಸಂವಿಧಾನದ ಆಶಯ ಬದಿಗೊತ್ತಿ ಎಸ್‌ಸಿ/ಎಸ್‌ಟಿ ಪಂಗಡದ ವಿದ್ಯಾರ್ಥಿಗಳಿಗೆ ಮೋಸ ಮಾಡಿದ್ದಾರೆ. ರಾಜ್ಯ ಸರಕಾರದ ಈ ಧೋರಣೆ ಖಂಡಿಸಿ ಜು.25ರಂದು ರಾಜ್ಯಾದ್ಯಂತ ಹೋರಾಟ ಮಾಡಲಾಗುತ್ತಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಹನುಮಂತಪ್ಪ ದೊಡ್ಡಮನಿ ಹೇಳಿದರು.




ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರಕಾರ ಶೋಷಿತ ಸಮುದಾಯಗಳ ಆಶಯಗಳನ್ನು ಈಡೇರಿಸುವ ಜತೆಗೆ, ಶಿಕ್ಷಣಕ್ಕೆ ಪ್ರಾತಿನಿಧ್ಯ ನೀಡಬೇಕಿತ್ತು. ಶಿಕ್ಷಣದಿಂದ ತಮ್ಮ ಬದುಕನ್ನು ಹಸನು ಮಾಡಿಕೊಳ್ಳುವ ಮೂಲಕ ಮುಖ್ಯವಾಹಿನಿಗೆ ಬರಲು ಇದರಿಂದ ಸಾಧ್ಯವಾಗುತ್ತಿತ್ತು. ಈ ಕಾರಣಕ್ಕಾಗಿಯೇ ಡಾ. ಬಿ.ಆರ್. ಅಂಬೇಡ್ಕರ್ ಶಿಕ್ಷಣಕ್ಕೆ ಮಹತ್ವ ನೀಡಿದ್ದರು. ಆದರೆ, ಈಗಿರುವ ರಾಜ್ಯ ಸರಕಾರ ಸಂವಿಧಾನದ ಆಶಯ ಬದಿಗೊತ್ತಿ ಎಸ್‌ಸಿ/ಎಸ್‌ಟಿ ಪಂಗಡದ ವಿದ್ಯಾರ್ಥಿಗಳಿಗೆ ಮೋಸ ಮಾಡಿದೆ ಎಂದು ಆರೋಪಿಸಿದರು.

ಎಸ್‌ಸಿ/ಎಸ್‌ಟಿ ಹಣ ದುರುಪಯೋಗಪಡಿಸಿಕೊಂಡ ಸರಕಾರದ ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಕೂಡಲೇ ರಾಜೀನಾಮೆ ನೀಡಬೇಕು. ಬಡ ವಿದ್ಯಾರ್ಥಿಗಳ ಪ್ರೋತ್ಸಾಹಧನವನ್ನು ಸರಕಾರ ಕಿತ್ತುಕೊಂಡಿದೆ. ಸಾಮಾಜಿಕ ನ್ಯಾಯದ ಹೆಸರಿನಲ್ಲಿ ಅಧಿಕಾರಕ್ಕೆ ಬಂದಿರುವ ರಾಜ್ಯ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಸಾಮಾಜಿಕ ನ್ಯಾಯದ ವಿರುದ್ಧವಾಗಿ ಆಡಳಿತ ಮಾಡುತ್ತಿದೆ. ಪಿಎಚ್‌ಡಿ ಹಾಗೂ ಉನ್ನತ ವ್ಯಾಸಂಗ ಮಾಡಲು ವಿದೇಶಕ್ಕೆ ಹೋಗುವ ವಿದ್ಯಾರ್ಥಿಗಳ ಸಹಾಯಧನಕ್ಕೂ ಸರಕಾರ ಕತ್ತರಿ ಹಾಕಿದ್ದು, ಈ ಯೋಜನೆ ಕೂಡಲೇ ಮುಂದುವರಿಸಬೇಕು ಎಂದು ಮನವಿ ಮಾಡಿಕೊಂಡರು.

ಎಸ್‌ಸಿ/ಎಸ್‌ಟಿ ಸಮುದಾಯದ ವಿದ್ಯಾರ್ಥಿಗಳಿಗೆ ಸರಕಾರ ಅಲ್ಪಪ್ರಮಾಣದಲ್ಲಿ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡುತ್ತಾ ಬಂದಿದೆ. ಇದನ್ನು ಹೆಚ್ಚು ಮಾಡಬೇಕಿತ್ತು. ಇದನ್ನು ಹೊರತುಪಡಿಸಿ, ಇದಕ್ಕೆ ಯಾವುದೇ ಕಾರಣವನ್ನು ನೀಡದೇ ಪ್ರೋತ್ಸಾಹ ಧನವನ್ನು ನಿಲ್ಲಿಸಿರುವುದು ಖಂಡನೀಯ. ಇದಕ್ಕೆ ಹಾಕಿರುವ ಶೇ.75 ಅಂಕ ಪಡೆದಿರಬೇಕು, ಕುಟುಂಬದ ವಾರ್ಷಿಕ ಆದಾಯ 6 ಲಕ್ಷ ಮೀರಬಾರದು ಎಂಬ ಮಾನದಂಡ ಅವೈಜ್ಞಾನಿಕವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ನಾಯಕತ್ವದ ರಾಜ್ಯ ಸರಕಾರ ಎಸ್‌ಸಿ/ಎಸ್‌ಟಿ ಜನಾಂಗದ ವಿರೋಧಿಯಾಗಿದೆ. ನಮ್ಮ ಸಮುದಾಯದ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿಕೊಂಡಿದೆ. ಇವರಿಗೆ ಧೈರ್ಯವಿದ್ದರೆ ಇತರೇ ಸಮುದಾಯದ ಹಣವನ್ನು ಮುಟ್ಟಲಿ ಎಂದು ಹನುಮಂತಪ್ಪ ದೊಡ್ಡಮನಿ ಸವಾಲು ಹಾಕಿದರು.

ಪತ್ರಿಕಾಗೋಷ್ಠಿಯಲ್ಲಿ ಪರಸಪ್ಪ ಮೇಣಸಗಿ, ಈಶ್ವರ ದೊಡ್ಡಮನಿ, ಸೋಮಯ್ಯ ದೊಡ್ಮನಿ, ಶಿವು ಭೂಮದ, ಶರಣು ಹಲಗಿ ಇದ್ದರು.

### ಆಟೋ ಚಾಲಕರ ಕಲ್ಯಾಣ ಮಂಡಳಿ ಸ್ಥಾಪನೆಗೆ ಸ್ಪಷ್ಟ ನಿಲುವು: ಎಚ್.ಕೆ. ಪಾಟೀಲ

## ಆಟೋ ಚಾಲಕರ ಬದುಕಿಗೆ ಸ್ಫೂರ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಆಟೋ ಚಾಲಕರ, ಮಾಲಕರ ಕುಂದು-ಕೊರತೆಗಳ ಬಗ್ಗೆ ಸಚಿವ ಎಚ್.ಕೆ. ಪಾಟೀಲ ಮತ್ತು ರಾಜ್ಯದ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿಯವರು ಇಲಾಖೆಯ ಉನ್ನತ ಅಧಿಕಾರಿಗಳ ಜೊತೆಗೆ ಸಚಿವರ ಕಾರ್ಯಾಲಯದಲ್ಲಿ ಸುದೀರ್ಘವಾಗಿ ಚರ್ಚಿಸಿ, ಆಟೋ ಚಾಲಕರ ಕಲ್ಯಾಣ ಮಂಡಳಿಗೆ ನಿಯಮಗಳನ್ನು ರೂಪಿಸಿ ಇನ್ನು ಕೆಲವೇ ದಿನಗಳಲ್ಲಿ ಆಟೋ ಚಾಲಕರ ಕಲ್ಯಾಣ ಮಂಡಳಿ ಸ್ಥಾಪನೆ ಮಾಡುವ ಕುರಿತು ಮಹತ್ತರವಾದ ನಿಲುವನ್ನು ಹೊಂದುವುದಾಗಿ ಸಚಿವ ಎಚ್.ಕೆ. ಪಾಟೀಲರು ತಿಳಿಸಿದರು.



ಗದಗ ಜಿಲ್ಲಾ ಆಟೋ ಚಾಲಕರ, ಮಾಲಕರ ಸಂಘದ ಪದಾಧಿಕಾರಿಗಳು ಹಾಗೂ ಉತ್ತರ ಕರ್ನಾಟಕ ಆಟೋ ಚಾಲಕರ ಮಾಲಕರ ಸಂಘದ ಪದಾಧಿಕಾರಿಗಳು ಇಡೀ ರಾಜ್ಯದ ಆಟೋ ಚಾಲಕರ ಸಮಸ್ಯೆಗಳನ್ನು ನಿರ್ವಹಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿರುವದಕ್ಕೆ ಸಾರಿಗೆ ಸಚಿವರು ಕಾನೂನು ಸಚಿವರು ಮುಕ್ತಕಂಠದಿಂದ ಶ್ಲಾಘಿಸಿದರು.

ಈ ಕಾರ್ಯ ರಾಜ್ಯದ ಆಟೋ ಚಾಲಕರ ಬದುಕಿಗೆ ಸ್ಫೂರ್ತಿಯಾಗಿದೆ. ಪ್ರಾಮಾಣಿಕ ಆಟೋ ಚಾಲಕರು ತಮ್ಮ ದುಡಿಮೆಯ ಜೊತೆಗೆ ಸಮಾಜದ ಕೆಲಸ-ಕಾರ್ಯಗಳಲ್ಲಿ ಭಾಗವಹಿಸುವುದರ ಫಲವಾಗಿ ಇಂದು ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಕಲ್ಯಾಣ ಮಂಡಳಿ ಸ್ಥಾಪನೆಗೆ ಫಲ ನೀಡಿದೆ ಎಂದು ಕರ್ನಾಟಕ ರಾಜ್ಯ ಖಾಸಗಿ ವಾಹನ ಮಾಲಕರ ಸಂಘದ ರಾಜ್ಯಾಧ್ಯಕ್ಷ ನಟರಾಜ ಶರ್ಮಾ ಅಭಿಪ್ರಾಯಪಟ್ಟರು.

ನಿಯೋಗದಲ್ಲಿ ಗದಗ ಜಿಲ್ಲಾ ಆಟೋ ಚಾಲಕರ, ಮಾಲಕರ ಸಂಘದ ಜಿಲ್ಲಾಧ್ಯಕ್ಷ ವಿಜಯ ಕಲ್ಮನಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಮನಗುಂಡಿ, ಸಹ ಕಾರ್ಯದರ್ಶಿ ರಾಘವೇಂದ್ರ ಗೆಜ್ಜಳ್ಳಿ, ಕೋಶಾಧ್ಯಕ್ಷ ಈರಣ್ಣ ಗೆಜ್ಜೆಳ್ಳಿ, ವಿಜಯ ಬಡಿಗೇರ, ಉತ್ತರ ಕರ್ನಾಟಕ ಆಟೋ ಚಾಲಕರ, ಮಾಲಕರ ಸಂಘದ ರಾಜ್ಯಾಧ್ಯಕ್ಷ ಶೇಖರಯ್ಯ ಮಠಪತಿ ಮುಂತಾದವರು ಭಾಗವಹಿಸಿದ್ದರು.

### ಜೆಡಿಎಸ್ ಕಾರ್ಯಕರ್ತರಿಂದ ಕಾಂಗ್ರೆಸ್ ಸರಕಾರ ವಜಾಗೊಳಿಸಲು ಆಗ್ರಹ

# ರಾಜ್ಯ ಸರಕಾರ ಭ್ರಷ್ಟಾಚಾರದಲ್ಲಿ ಮುಳಗಿದೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಭ್ರಷ್ಟಾಚಾರಿ ಹಾಗೂ ಜನವಿರೋಧಿ ಕಾಂಗ್ರೆಸ್ ಸರಕಾರವನ್ನು ವಜಾಗೊಳಿಸಬೇಕೆಂದು ಆಗ್ರಹಿಸಿ ಜೆಡಿಎಸ್ (ಜಾ) ಕಾರ್ಯಕರ್ತರು ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ, ಶಿರಹಟ್ಟಿ ತಾಲೂಕಾ ಸಂ. ಕಾರ್ಯದರ್ಶಿ ಡಾ. ಶರಣಪ್ಪ ಹೂಗಾರ, ತಾಲೂಕಾಧ್ಯಕ್ಷ ಪ್ರವೀಣ ಬಾಳಿಕಾಯಿ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರಕಾರ ಕಳೆದ ಒಂದು ವರ್ಷದಿಂದ ಗ್ಯಾರಂಟಿಯ ನೆಪ ಮಾಡಿಕೊಂಡು ಎಲ್ಲ ಅಗತ್ಯ ವಸ್ತುಗಳ ಬೆಲೆಯನ್ನು ಏರಿಕೆ ಮಾಡಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ನಿತ್ಯ ಕೊಲೆ-ಸುಲಿಗೆಗಳು ನಡೆಯುತ್ತಿವೆ. ವಾಲ್ಮೀಕಿ ನಿಗಮದಲ್ಲಿ 187 ಕೋಟಿ ರೂ.ಗಳ ಹರಗಣ, ಮೂಡಾ ನಿವೇಶನ ಹಗರಣಗಳನ್ನು ನೋಡಿದರೆ ಸರಕಾರ ಭ್ರಷ್ಟಾಚಾರದಲ್ಲಿ ಮುಳಗಿರುವುದು ಎದ್ದು ಕಾಣುತ್ತಿದೆ.

ಇದಕ್ಕೂ ಮೊದಲು ಪಟ್ಟಣದ ಶ್ರೀ ಆಂಜನೇಯ ದೇವಸ್ಥಾನದಿಂದ ಕಾಂಗ್ರೆಸ್ ಸರಕಾರದ ವಿರುದ್ಧ ಘೋಷಣೆ ಕೂಗುತ್ತಾ, ಬಸವೇಶ್ವರ ವೃತ್ತ, ನೆಹರು ವೃತ್ತದ ಮೂಲಕ ತಹಶೀಲ್ದಾರ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಯಿತು.

ಇತ್ತೀಚೆಗೆ ಉತ್ತರ ಕನ್ನಡ ಜಿಲ್ಲೆಯ ಶಿರೂರ ಬಳಿ ಗುಡ್ಡ ಕುಸಿತದ ಸ್ಥಳ ವೀಕ್ಷಣಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಆಗಮಿಸಿದರೆ ಅದನ್ನು ಸಹಿಸದ ಕಾಂಗ್ರೆಸ್ ನಾಯಕರು ವಿನಾಕಾರಣ ಟೀಕಿಸುತ್ತಿದ್ದಾರೆ. ಎಚ್‌ಡಿಕೆ ಬಂದು ಹೋದ ಮೇಲೆ ರಾಜ್ಯ ನಾಯಕರು ಸ್ಥಳಕ್ಕೆ ತೆರಳುತ್ತಿದ್ದಾರೆ. ಹೀಗಾಗಿ ಜನ ವಿರೋಧಿ ಆಗಿರುವ ಈ ಸರ್ಕಾರದ ವಿರುದ್ಧ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಮನವಿಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಸಿದ್ದಲಿಂಗಯ್ಯ ಹೊಂಬಾಳಿಮಠ, ಶಿವಯ್ಯ ಬಾಳಿಹಳ್ಳಿಮಠ, ಎಂ.ಕೆ. ಕೊಟ್ಟಿಮಠ, ದೇವಪ್ಪ ಮಲಸಮುದ್ರ, ಮೌಲಾಹುಸೇನ ತಂಬೂಲಿ, ರಾಯಸಾಬ ಢಾಲಾಯತ, ಹನುಮಂತಪ್ಪ ಮರಿಗೌಡ್ರ, ಜೋಗೆಪ್ಪ ಆದಿ, ಲಲಿತಾ ಕಲ್ಲಪ್ಪನವರ, ಬಾದಶಾ ಭಾಗವಾನ, ರಾಜೇಸಾಬ ಢಾಲಾಯತ, ವಿನಾಯಕ ಪರಬತ, ವಾಯ್.ಡಿ. ಹೂಗಾರ, ಎಂ.ಎಂ. ಪಾಟೀಲ, ವೀರೇಶ ಬಣಗಾರ, ಬಸಪ್ಪ ಬಳ್ಳಾರಿ, ಮಮ್ಮದ ಇಸಾಕ, ಮಾಬುಸಾಬ ಮಜ್ಜೂರ, ಫಕ್ಕೀರಪ್ಪ ತುಳಿ, ಅಭಿಷೇಕ ಕಂಬಳಿ, ಮರಿಯಪ್ಪ ಬಳ್ಳಾರಿ, ರೇಖಾ ಬೆಂತೂರ, ಮಲ್ಲು ಮಲ್ಲಸಮುದ್ರ, ರೇಖಾ ಬೆಂತೂರ, ಮಮ್ಮದಲಿ ಮುಳಗುಂದ, ಅಲ್ಲಾಭಕ್ಷಿ ಮುಳಗುಂದ, ಸಾಗರ ಮುಂಡರಗಿ, ಜಯರಾಜ ವಾಲಿ, ಅಭಿಷೇಕ ಕಂಬಳಿ ಮುಂತಾದವರು ಉಪಸ್ಥಿತರಿದ್ದರು.

## ಸಂಪಾದಕೀಯ

# ಅಧಿಕಾರ ರಾಜಕೀಯ ಬಜೆಟ್

ಕೇಂದ್ರ ವಿತ್ತ ಸಚಿವ ನಿರ್ಮಲಾ ಸೀತಾರಾಮನ್ ಸತತ 7ನೆ ಬಾರಿಗೆ ಬಜೆಟ್ ಮಂಡಿಸಿ ದೇಶದ ಇತಿಹಾಸದಲ್ಲಿಯೇ ಹೊಸ ಅಧ್ಯಾಯ ಸೃಷ್ಟಿಸಿದ್ದಾರೆ. ಮಹಿಳೆಯೊಬ್ಬರು ಈ ರೀತಿ ಸತತ 7ನೆ ಬಾರಿ ಬಜೆಟ್ ಮಂಡಿಸುವುದು ಸಾಮಾನ್ಯ ಕೆಲಸವೂ ಅಲ್ಲ. ಆದರೆ ಅಂಥ ಕೆಲಸವನ್ನು ನಿರ್ಮಲಾ ಸೀತರಾಮನ್ ಮಾಡಿ ತೋರಿಸಿದ್ದಾರೆ.

ಆದರೆ ಕೇಂದ್ರದ ಬಜೆಟ್ ವರ್ಷದಿಂದ ವರ್ಷಕ್ಕೆ ಹೊಳಪು ಕಳೆದುಕೊಳ್ಳುತ್ತಿದೆ. ಬಜೆಟ್ ಸಪ್ಪೆ ಎನಿಸುವಂಥ ನಿರ್ಧಾರಗಳನ್ನು ಕೈಗೊಳ್ಳುತ್ತಿರುವುದು ಸ್ಪಷ್ಟವಾಗುತ್ತಿದೆ. ಅದರಲ್ಲೂ ಈ ಬಾರಿ ಉದ್ಯೋಗ, ಮಹಿಳೆ, ಯುವಕರು ಹೀಗೆ ವಲಯವಾರು ಅನುದಾನ ಮೀಸಲಿಟ್ಟು, ಕಾರ್ಯಕ್ರಮ ಅನುಷ್ಠಾನಗೊಳಿಸಿರುವುದು ಸಂಪೂರ್ಣವಾಗಿ ಒಳ್ಳೆಯದು ಎಂದು ಒಪ್ಪಿಕೊಳ್ಳಲು ಸಾಧ್ಯವಿಲ್ಲ.

ಕೇಂದ್ರದಲ್ಲಿ ಯಾವುದೇ ಸರಕಾರ ಅಧಿಕಾರದಲ್ಲಿರಲಿ. ಬಜೆಟ್ ಬಗ್ಗೆ ಪರ ವಿರೋಧ ಚರ್ಚೆ ಇದ್ದಿದ್ದೆ. ಆದರೆ ನಿರ್ಮಲಾ ಸೀತಾರಾಮನ್ ಅವರು ಮಂಗಳವಾರ ಮಂಡಿಸಿದ ಬಜೆಟ್ ಅಧಿಕಾರ ರಾಜಕಾರಣದ ಬಜೆಟ್ ಎಂದು ಬಣ್ಣಿಸಬಹುದು. ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಬಹುದೊಡ್ಡ ಪಕ್ಷವಾಗಿ ಹೊರಹೊಮ್ಮಬೇಕಾಗಿದ್ದ ಬಿಜೆಪಿ ಸಂಖ್ಯಾಬಲ ಕುಸಿದಿದೆ. ಸಹಜವಾಗಿ ಮಿತ್ರಪಕ್ಷಗಳನ್ನು ನಂಬಿಯೇ ಅಧಿಕಾರ ನಡೆಸಬೇಕಾದ ಅನಿವಾರ್ಯತೆ. ಆ ಅನಿವಾರ್ಯತೆಯ ಪರಿಣಾಮ ನೇರವಾಗಿ ಬಜೆಟ್ ಮೇಲೆ ಆಗಿದೆ.

ಅದರಲ್ಲೂ ಬಿಹಾರ್ ಮತ್ತು ಆಂಧ್ರಪ್ರದೇಶ ರಾಜ್ಯಗಳಿಗೆ ನೀಡಿರುವ ವಿಶೇಷ ಆದ್ಯತೆ ಆಡಳಿತ ಪಕ್ಷದ ಸದಸ್ಯರೂ ಆಕ್ಷೇಪ ವ್ಯಕ್ತಪಡಿಸುವಷ್ಟು ಹೆಚ್ಚಾಗಿರುವುದು ಕಾಣಬಹುದು. ಕೇಂದ್ರದಲ್ಲಿ ಎನ್ ಡಿಎ ಅಧಿಕಾರಕ್ಕೆ ಬರಬೇಕಾದರೆ ಆಂಧ್ರ ಮತ್ತು ಬಿಹಾರ್ ಸಂಸದರ ಬಲ ಬೇಕೆ ಬೇಕೆ ಎನ್ನುವ ಪರಿಸ್ಥಿತಿ ಇರುವಾಗ, ಸಹಜವಾಗಿ ತುಸು ಹೆಚ್ಚೆ ಎನಿಸುವಷ್ಟು ಪ್ರಾಮುಖ್ಯತೆ, ಅನುದಾನ ಕೊಟ್ಟು ಸಂತೈಸಿದ್ದಾರೆ.

ಒಕ್ಕೂಟ ವ್ಯವಸ್ಥೆಯಲ್ಲಿ ಸರ್ವರನ್ನೂ ಸಮಾನವಾಗಿ ಕಾಣಬೇಕಾದ ವಿತ್ತ ಸಚಿವರು ಅಧಿಕಾರಕ್ಕಾಗಿ ಬಜೆಟ್ ನಲ್ಲಿಯೂ ರಾಜಕಾರಣ ಮಾಡಬೇಕಾದ ಪರಿಸ್ಥಿತಿ ತಂದುಕೊಂಡಿದ್ದಾರೆ. ಇದೆಲ್ಲದರ ಮಧ್ಯೆಯೂ ಕರ್ನಾಟಕದಿಂದ ಆಯ್ಕೆಯಾಗಿರುವ ನಿರ್ಮಲಾ ಸೀತಾರಾಮನ್ ಕರ್ನಾಟಕಕ್ಕೆ ಒಂದು ಹಿಡಿ ಅನುದಾನ ಹೆಚ್ಚು ಕೊಡಲು ಅವಕಾಶವಿತ್ತು. ಕರ್ನಾಟಕಕ್ಕೆ ಒಂದು ಪ್ರತ್ಯೇಕ ಕಾರ್ಯಕ್ರಮ ಘೋಷಣೆ ಮಾಡಿದ್ದರೂ ಯಾರೊಬ್ಬರೂ ಆಕ್ಷೇಪ ವ್ಯಕ್ತಪಡಿಸುತ್ತಿದ್ದಿಲ್ಲ. ಆದರೆ ನಿರ್ಮಲಾ ಸೀತಾರಾಮನ್, ಕೇವಲ ಬಿಹಾರ ಮತ್ತು ಆಂಧ್ರಪ್ರದೇಶವನ್ನ ಮಾತ್ರ ಪರಿಗಣಿಸಿದ್ದು ಕಂಗೆಣ್ಣಿಗೆ ಗುರಿಯಾಗಿದೆ.

ಇನ್ನು ಬಜೆಟ್ ಕಾರ್ಯಕ್ರಮಗಳ ಪೈಕಿ ಪ್ರಮುಖ ವಲಯಗಳನ್ನು ತಲುಪುವ ಪ್ರಯತ್ನ ಮಾಡಿದ್ದಾರೆ. ಆದರೆ ಯಾವುದೇ ವಲಯಕ್ಕೂ ಪೂರ್ಣ ಪ್ರಮಾಣದ ಆದ್ಯತೆ ಸಿಕ್ಕಿಲ್ಲ. ಮುದ್ರಾ ಯೋಜನೆಯ ಸಾಲದ ಮಿತಿ ಹೆಚ್ಚಳ ಮಾಡಿದ್ದಾರೆ. ಆದರೆ ಈ ಹಿಂದಿನ ವರ್ಷದಲ್ಲಿ ಎಷ್ಟು ಜನರಿಗೆ ಅದರಿಂದ ಲಾಭ ಸಿಕ್ಕಿದೆ ಎನ್ನುವ ಅಂಕಿ ಸಂಖ್ಯೆ ಮಾತ್ರ ಇಲ್ಲ. ಅದೇ ರೀತಿ ಈ ಬಾರಿಯೂ ತೆರಿಗೆ ಭಾರ ಹೆಚ್ಚಿಸುವ ಮೂಲಕ ಜನರ ಆಕ್ರೋಶಕ್ಕೆ ಕಾರಣರಾಗಿದ್ದಾರೆ. ಅದರ ಪರಿಣಾಮಗಳು ಕೇಂದ್ರ ಸರಕಾರ ಮುಂದಿನ ದಿನಗಳಲ್ಲಿ ಎದುರಿಸಲಿದೆ.

# ಕೇಂದ್ರದ ಬಜೆಟ್ ನಿರಾಶಾದಾಯಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಪ್ರತಿನಿಧಿಸುವ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಬಜೆಟ್ ಕರ್ನಾಟಕದ ಜನತೆಗೆ ನಿರಾಸೆ ಮೂಡಿಸಿದೆ. ಅದರಲ್ಲೂ ಉತ್ತರ ಕರ್ನಾಟಕದ ಜನರ ನೀರಾವರಿ, ರಸ್ತೆ, ಶಿಕ್ಷಣ, ಕೃಷಿ, ಆರೋಗ್ಯ ಕ್ಷೇತ್ರದ ಬಗ್ಗೆ ಇಟ್ಟುಕೊಂಡಿದ್ದ ನಿರೀಕ್ಷೆಗಳು ಹುಸಿಯಾಗಿವೆ ಎಂದು ಕಾಂಗ್ರೆಸ್ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ ಪ್ರತಿಕ್ರಿಯಿಸಿದ್ದಾರೆ.

ಈ ಭಾಗದ ಸಂಸದರು ರಾಜ್ಯದ ಮತ್ತು ತಾವು ಪ್ರತಿನಿಧಿಸುವ ಕ್ಷೇತ್ರದ ಅಭಿವೃದ್ಧಿ ಮತ್ತು ಜನರ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಫಲರಾಗಿದ್ದಾರೆ. ಒಟ್ಟಿನಲ್ಲಿ ಕೇಂದ್ರ ಸರ್ಕಾರದ ಬಜೆಟ್ ಬಗ್ಗೆ ಇದ್ದ ನಿರೀಕ್ಷೆಗಳು ಸಂಪೂರ್ಣ ಹುಸಿಯಾಗಿವೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷರು, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿಗಳಾದ ಡಾ. ಬಸವರಾಜ ಬಳ್ಳಾರಿ ಅವರು ತಮ್ಮ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ ಮಂಗಳವಾರ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪರಮ ಪೂಜ್ಯ ಕಲ್ಲಯ್ಯಜ್ಜನವರನ್ನು ಡಾ. ಬಸವರಾಜ ಬಳ್ಳಾರಿ ದಂಪತಿಗಳು ಸನ್ಮಾನಿಸಿ, ಅವರಿಂದ ಆಶೀರ್ವಾದ ಪಡೆದರು.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷರು, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿಗಳಾದ ಡಾ. ಬಸವರಾಜ ಬಳ್ಳಾರಿ ಅವರು ತಮ್ಮ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಮಂಗಳವಾರ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿನ ಭೂಲೋಕದ ಭಗವಂತ, ನಡೆದಾಡು ದೇವರೆಂದೇ ಖ್ಯಾತರಾದ ಲಿಂ. ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಗದ್ದುಗೆಗೆ ದಂಪತಿ ಸಮೇತ ವಿಶೇಷ ಪೂಜೆಯನ್ನು ಸಲ್ಲಿಸಿದರು.

### ಜ. ತೋಂಟದಾರ್ಯ ಶಾಲೆಯಲ್ಲಿ ವಿದ್ಯಾರ್ಥಿ ಸಂಸತ್, ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ

# ಮತದಾನದ ಮಹತ್ವವನ್ನು ಅರಿಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವತ್ರಿಕ ಚುನಾವಣೆಗಳು ಹಾಗೂ ಸರ್ಕಾರ ರಚನೆ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಅಣಕು ಸಂಸತ್ ರಚನೆಯನ್ನು ಶಾಲೆಯಲ್ಲಿ ಪರಿಚಯಿಸಲಾಗಿದೆ. ಪ್ರಾಥಮಿಕ ಮತ್ತು ಪ್ರೌಢಶಾಲೆ ಹಂತದಲ್ಲೇ ವಿದ್ಯಾರ್ಥಿಗಳು ತಮ್ಮ ಪ್ರತಿನಿಧಿಗಳನ್ನು ಚುನಾವಣೆ ಮೂಲಕ ಆಯ್ಕೆ ಮಾಡಿ ಪ್ರಜಾಪ್ರಭುತ್ವ ಹಾಗೂ ಮತದಾನ ಪದ್ಧತಿಯ ಮಹತ್ವವನ್ನು ಅರಿಯಬೇಕು ಎಂದು ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ನುಡಿದರು.

ಅವರು ಇತ್ತೀಚೆಗೆ ನಗರದ ಜಗದ್ಗುರು ತೋಂಟದಾರ್ಯ ಕನ್ನಡ ಹಾಗೂ ಆಂಗ್ಲಮಾಧ್ಯಮ ಪ್ರಾಥಮಿಕ-ಪ್ರೌಢಶಾಲೆಯಲ್ಲಿ ಜರುಗಿದ ಶಾಲಾ ಸಂಸತ್ ಹಾಗೂ ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಲಾಗುತ್ತಿದ್ದು, ಲಿಂ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಆಶಯಗಳಿಗೆ



ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಚೇರಮನ್ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಪ್ರೌಢಶಾಲೆಯ ವಿದ್ಯಾರ್ಥಿಗಳು ಶ್ರದ್ಧೆಯಿಂದ, ತಾಳ್ಮೆಯಿಂದ ಅಭ್ಯಾಸದಲ್ಲಿ ಮಗ್ನರಾಗಬೇಕು. ಮನೆಯಲ್ಲಿ ಹಿರಿಯರ-ಕಿರಿಯರ ಜೊತೆ ಗೌರವದಿಂದ ನಡೆದುಕೊಳ್ಳಬೇಕು. ನಿರಂತರ ಅಧ್ಯಯನದಿಂದ ಗುರಿ ಮುಟ್ಟಲು ಸಾಧ್ಯವಿದ್ದು, ಪ್ರಜಾಪ್ರಭುತ್ವದ ಅರಿವನ್ನು ಪಡೆಯುವ ನಿಟ್ಟಿನಲ್ಲಿ ಶಾಲೆಯಲ್ಲಿ ನಡೆಸಿದ ಸಂಸತ್ ಚಟುವಟಿಕೆಗಳು ಪರಿಣಾಮಕಾರಿಯಾಗಿವೆ ಎಂದರು.

ಅನುಗುಣವಾಗಿ ಈ ಶಾಲೆ ಕಾರ್ಯನಿರ್ವಹಿಸುತ್ತಿದೆ. ಪ್ರಜಾಪ್ರಭುತ್ವದ ಆಶಯಗಳು 12ನೇ ಶತಮಾನದ ಬಸವೇಶ್ವರರ ವಚನಗಳಲ್ಲಿ ವ್ಯಕ್ತವಾಗಿವೆ. ಬಸವಾದಿ ಶರಣರ ವಚನಗಳಲ್ಲಿ ಸಂವಿಧಾನದ ಅಂಶಗಳು ಅಡಕವಾಗಿದ್ದು, ಮಕ್ಕಳು ಸಂವಿಧಾನದ ಮಹತ್ವವನ್ನು ತಿಳಿದುಕೊಳ್ಳಬೇಕು ಎಂದು ಮಾರ್ಗದರ್ಶನ ಮಾಡಿದರು.

ಇನ್ನೋರ್ವ ಅತಿಥಿ ಜೆ.ಡಿ. ದಾಸರ ಮಾತನಾಡಿ, ಓದು-ಬರಹದಲ್ಲಿ ನೂರಕ್ಕೆ ನೂರರಷ್ಟು ಅಂಕಗಳನ್ನು ಗಳಿಸಿ ಒಳ್ಳೆಯ ವ್ಯಕ್ತಿತ್ವವನ್ನು ರೂಪಿಸಿಕೊಳ್ಳದಿದ್ದರೆ ಅಂಥ ಓದು ವ್ಯರ್ಥವಾಗುತ್ತದೆ. ಏನಾದರೂ ಆಗು ಮೊದಲು ಮಾನವನಾಗು ಎಂಬ ರಾಷ್ಟ್ರಕವಿ ಕುವೆಂಪುರವರ ಮಾತಿನಂತೆ ಮಕ್ಕಳಲ್ಲಿ ಮಾನವೀಯತೆ ವೈದಳೆಂುುಬೇಕಿದ್ದು,

ತೋಂಟದಾರ್ಯ ಶಾಲೆ ಗುಣಮಟ್ಟದ ಶಿಕ್ಷಣದ ಜೊತೆಗೆ ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುತ್ತಿದೆ ಎಂದರು.

ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಕೊಟ್ರೇಶ ಮೆಣಸಿನಕಾಯಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆ ಮೇಲೆ ತೋಂಟದಾರ್ಯ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿ ಸದಸ್ಯರಾದ ಅಮರೇಶ ಅಂಗಡಿ, ಶೇಖಣ್ಣ ಕಳಸಾಪೂರ, ಲಿಂಗರಾಜಗೌಡ ಪಾಟೀಲ ಉಪಸ್ಥಿತರಿದ್ದರು.

ಮತದಾನದ ಮೂಲಕ ಆಯ್ಕೆಯಾದ ವಿದ್ಯಾರ್ಥಿ ಪ್ರತಿನಿಧಿಗಳು ತಮ್ಮ ತಮ್ಮ ಖಾತೆಗೆ ಅನುಗುಣವಾಗಿ ಪ್ರಮಾಣವಚನ ಸ್ವೀಕರಿಸಿದರು. ಎಲ್.ಕೆ.ಜಿ ಹಾಗೂ ಯು.ಕೆ.ಜಿ ಮಕ್ಕಳಿಗೆ ಅಕ್ಷರಾಭ್ಯಾಸ ಜರುಗಿತು. ಪ್ರೌಢಶಾಲೆ ವಿದ್ಯಾರ್ಥಿಗಳು ವಚನ ನೃತ್ಯ ಪ್ರದರ್ಶಿಸಿದರು. ಸುಧಾ ಅವರಾದಿ ಸ್ವಾಗತಿಸಿದರು. ಸುರೇಖಾ ಕುಂಬಾರಗೇರಿಮಠ ನಿರೂಪಿಸಿದರು. ಶಾಲೆಯ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಕಿಶೋರಿಯರಿಗೆ ಕಲಿಕಾ ಕಿಟ್ ವಿತರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಕ್ಕನ ಬಳಗ ಸಭಾ ಭವನದಲ್ಲಿ ಮಿಲಾನ್ ಫೌಂಡೇಶನ್ ಹಾಗೂ ಬಾಗಲಕೋಟೆ ಜಿಲ್ಲೆಯ ಗರ್ಲ್ ಐಕಾನ್ ವತಿಯಿಂದ ಹೆಣ್ಣು ಮಕ್ಕಳಿಗೆ ಕೌಶಲ್ಯ ತರಬೇತಿ ಹಾಗೂ ಶಿಕ್ಷಣ ಪೂರಕವಾದ ಕಲಿಕಾ ಕಿಟ್ ವಿತರಿಸಲಾಯಿತು.

ಸಂಯೋಜಕಿ ರೂಪಾ ಮರಿಗೌಡ್ರ ಮಾತನಾಡಿ, ಮಿಲಾನ್ ಫೌಂಡೇಶನ್ 2007ರಲ್ಲಿ ಅಸ್ತಿತ್ವಕ್ಕೆ ಬಂದಿತು. ಈ ಸಂಸ್ಥೆಯು ಕಿಶೋರಿಯರ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚು ಪ್ರೋತ್ಸಾಹಿಸಲಿದೆ. ಮಹಿಳೆಯರ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವಲ್ಲಿ ಮತ್ತು ಅವರ ಕನಸುಗಳನ್ನು ನನಸಾಗಿಸುವಲ್ಲಿ ಈ ಸಂಸ್ಥೆಯು ಸಹಾಯಕವಾಗಿದೆ ಎಂದರು.

ಸಂಯೋಜಕಿ ಪೂಜಾ ಗಡಗಿ ಮಾತನಾಡಿ, ಗ್ರಾಮೀಣ ಅದರಲ್ಲೂ ಬಡ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಅನುಕೂಲ ಆಗಲೆಂದು ಆಯಾ ಕೋರ್ಸ್‌ಗಳಿಗೆ ಅನುಗುಣವಾಗಿ ಸ್ಕಾಲರ್‌ಶಿಪ್, ಮೊಬೈಲ್, ಬುಕ್ಸ್, ಬ್ಯಾಗ್, ಡ್ರೆಸ್ ಕಿಟ್‌ಗಳನ್ನು ಸಹ ನೀಡಲಾಗುತ್ತಿದೆ. ಗರ್ಲ್ ಐಕಾನ್ ಮಹಿಳೆಯರು ಅಭಿವೃದ್ಧಿ ಹೊಂದಲು ಸುರಕ್ಷಿತ ಮತ್ತು ಸಮಾನ ವೇದಿಕೆ ಕಲ್ಪಿಸಿ ಕೊಡುವಲ್ಲಿ ಪ್ರಯತ್ನ ನಡೆಸಿದೆ ಎಂದರು.

ಗದಗ ಹಾಗೂ ಬಾಗಲಕೋಟೆ ಜಿಲ್ಲೆಯಿಂದ ಬಂದ 90ಕ್ಕೂ ಅಧಿಕ ಹೆಣ್ಣು ಮಕ್ಕಳಿಗೆ ಮೊಬೈಲ್, ಬುಕ್ಸ್, ಬ್ಯಾಗ್, ಪೆನ್ ಇತ್ಯಾದಿಗಳನ್ನು ಉಚಿತವಾಗಿ ನೀಡಲಾಯಿತು. ಸರಿತಾ, ರಕ್ಷಿತಾ, ಸಾವಕ್ಕ, ಕೊಂತೆಮ್ಮ, ಪವಿತ್ರಾ, ಸ್ನೇಹಾ, ಸಿಂಧು, ಸೌಮ್ಯ, ದೀಪಾ, ಶಿವಲೀಲಾ, ಅಮೂಲ್ಯ, ಪವಿತ್ರಾ, ತೇಜಸ್ವಿ, ಸಕ್ಕೂಬಾಯಿ ಸೇರಿದಂತೆ ಅನೇಕ ಸಿಬ್ಬಂದಿಗಳು, ಗರ್ಲ್ ಐಕಾನ್ಸ್ ಹಾಗೂ ಪಾಲಕರು ಉಪಸ್ಥಿತರಿದ್ದರು. ಸರಿತಾ ಸ್ವಾಗತಿಸಿದರು. ಲಕ್ಷ್ಮೀ ಪವಾರ್ ನಿರೂಪಿಸಿದರು. ಹುಲಿಗೆಮ್ಮ ವಂದಿಸಿದರು.

### ಕೇಂದ್ರ ಬಜೆಟ್ 2024

# ಕ್ಯಾನ್ಸರ್ ಔಷಧಿ, ಮೊಬೈಲ್ ಫೋನ್‌ಗಳ ಮೇಲಿನ ಕಸ್ಟಮ್ಸ್ ಸುಂಕದಲ್ಲಿ ಭಾರಿ ಕಡಿತ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಮಂಡಿಸಿದ 2024ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ, ಕ್ಯಾನ್ಸರ್ ಔಷಧಿಗಳು ಮತ್ತು ಮೊಬೈಲ್ ಫೋನ್‌ಗಳ ಮೇಲಿನ ಕಸ್ಟಮ್ಸ್ ಸುಂಕದಲ್ಲಿ ಭಾರಿ ಕಡಿತವನ್ನು ಘೋಷಿಸಿದರು. ಇದು ಚಿಲ್ಲರೆ ಮಾರುಕಟ್ಟೆಯಲ್ಲಿ ಅವುಗಳ ಬೆಲೆಗಳನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಆಮದು ಮಾಡಿಕೊಳ್ಳುವ ಚಿನ್ನ, ಬೆಳ್ಳಿ, ಚರ್ಮದ ವಸ್ತುಗಳು ಮತ್ತು ಸಮುದ್ರಾಹಾರ ಕೂಡ ಅಗ್ಗವಾಗಲಿದೆ.

"ಸರ್ಕಾರವು ಇನ್ನೂ 3 ಕ್ಯಾನ್ಸರ್ ಚಿಕಿತ್ಸಾ ಔಷಧಗಳಿಗೆ ಕಸ್ಟಮ್ಸ್ ಸುಂಕದಿಂದ ವಿನಾಯಿತಿ ನೀಡಲಿದೆ. ನಾವು ಮೊಬೈಲ್ ಫೋನ್‌ಗಳು, ಚಾರ್ಜರ್‌ಗಳು ಮತ್ತು ಇತರ



ಮೊಬೈಲ್ ಭಾಗಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕವನ್ನು ಸಹ ಕಡಿಮೆ ಮಾಡುತ್ತೇವೆ" ಎಂದು ಸಂಸತ್ತಿನಲ್ಲಿ ಬಜೆಟ್ 2024 ಅನ್ನು ಮಂಡಿಸುವಾಗ ಸೀತಾರಾಮನ್ ಹೇಳಿದರು.

ಚಿನ್ನ ಮತ್ತು ಬೆಳ್ಳಿಯ ಮೇಲಿನ ಆಮದು ಸುಂಕವನ್ನು 6% ಕ್ಕೆ ಕಡಿತಗೊಳಿಸಿರುವುದಾಗಿ ಘೋಷಿಸಿದ್ದಾರೆ. ಇದರಿಂದ, ಆಭರಣಗಳ ಚಿಲ್ಲರೆ ಬೇಡಿಕೆಯನ್ನು ಹೆಚ್ಚಿಸಬಹುದು ಮತ್ತು ವಿಶ್ವದ ಎರಡನೇ ಅತಿದೊಡ್ಡ ಬೆಳ್ಳಿಯ ಗ್ರಾಹಕರ ಕಳ್ಳಸಾಗಣೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಅಂದಾಜಿಸಲಾಗಿದೆ.

ಭಾರತದಿಂದ ಚಿನ್ನಕ್ಕೆ ಹೆಚ್ಚಿನ ಬೇಡಿಕೆಯು ಜಾಗತಿಕ ಬೆಲೆಗಳನ್ನು ಬೆಂಬಲಿಸಬಹುದು, ಇದು ಈ ವರ್ಷದ ಆರಂಭದಲ್ಲಿ ದಾಖಲೆಯ ಗರಿಷ್ಠ ಮಟ್ಟವನ್ನು ತಲುಪಿತು. ಆದರೂ ಅದು ಭಾರತದ ವ್ಯಾಪಾರ ಕೊರತೆಯನ್ನು ಹೆಚ್ಚಿಸುವುದರ ಜತೆಗೆ, ಕುಸಿಯುತ್ತಿರುವ ರೂಪಾಯಿಯ ಮೇಲೆ ಮತ್ತಷ್ಟು ಭಾರವನ್ನು ಉಂಟುಮಾಡಬಹುದು.

ಮತ್ತೊಂದೆಡೆ, ಸರ್ಕಾರವು ಅಮೋನಿಯಂ ನೈಟ್ರೇಟ್ ಮೇಲಿನ ಕಸ್ಟಮ್ಸ್ ಸುಂಕವನ್ನು 10% ಮತ್ತು ಜೈವಿಕ ವಿಘಟನೀಯವಲ್ಲದ ಪ್ಲಾಸ್ಟಿಕ್‌ಗಳ ಮೇಲೆ 25% ರಷ್ಟು ಹೆಚ್ಚಿಸಲಿದೆ.

ಇದು ಮೋದಿ 3.0 ಸರ್ಕಾರದ ಮೊದಲ ಬಜೆಟ್ ಆಗಿದ್ದು, ಮೂಲಸೌಕರ್ಯ ಅಭಿವೃದ್ಧಿಯಿಂದ ಸಾಮಾಜಿಕ ಕಲ್ಯಾಣ ಕಾರ್ಯಕ್ರಮಗಳವರೆಗೆ ವಿವಿಧ ಕ್ಷೇತ್ರಗಳ ಮೇಲೆ ಸ್ಪರ್ಶಿಸುವ ಭಾರತದ ಆರ್ಥಿಕತೆ ಮೇಲೆ ಗಮನಾರ್ಹ ಪರಿಣಾಮ ಬೀರುವ ನಿರೀಕ್ಷೆಯಿದೆ.

ವಿತ್ತ ಸಚಿವರು ಸದೃಢ ಬಜೆಟ್ ಮಂಡಿಸಲಿದ್ದಾರೆ ಎಂದು ಹೇಳಿದ್ದ ಪ್ರಧಾನಿ ನರೇಂದ್ರ ಮೋದಿ, ಸರ್ಕಾರದ ಭರವಸೆಗಳು ಜನಸಾಮಾನ್ಯರಿಗೆ ತಲುಪುವಂತೆ ನೋಡಿಕೊಳ್ಳುವುದಾಗಿ ಹೇಳಿದ್ದಾರೆ. ಸಂಸತ್ತಿನ ಮುಂಗಾರು ಅಧಿವೇಶನದ ಮೊದಲ ದಿನವಾದ ನಿನ್ನೆ ನಿರ್ಮಲಾ ಸೀತಾರಾಮನ್ ಅವರು ಆರ್ಥಿಕ ಸಮೀಕ್ಷೆಯನ್ನು ಮಂಡಿಸಿದರು.

# ಗುರುಗಳ ಮಾರ್ಗದರ್ಶನದಲ್ಲಿ ನಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜಿನ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆ ಉದ್ಘಾಟನಾ ಕಾರ್ಯಕ್ರಮ ನೆರವೇರಿತು. ಮುಖ್ಯ ಅಥಿತಿಗಳಾಗಿ ಆಂಗ್ಲೋ ಉರ್ದು ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಈರಣ್ಣ ಪಿ.ಹಾದಿಮನಿ ಮಾತನಾಡಿ, ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಯಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಗೊಳ್ಳುವುದರೊಂದಿಗೆ ಆದರ್ಶ ಬದುಕು ಸಾಗಿಸಲು ಸಾಧ್ಯ ಎಂದರು.

ವಂಹಾವಿದ್ಯಾಲಂುು ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು ಸಂಯಮದಿಂದ ವರ್ತಿಸುತ್ತಾ ಕಾಲೇಜಿನಲ್ಲಿ ಜರುಗುವ ಎಲ್ಲ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಗುರುಗಳ ಮಾರ್ಗದರ್ಶನದಲ್ಲಿ ನಡೆಯಿರಿ. ವಿದ್ಯಾರ್ಥಿಗಳು ಮೊಬೈಲ್‌ನ್ನು ಇತಿ ಮಿತಿಯಲ್ಲಿ ಬಳಸಲು ತಿಳಿಸಿದರು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ ಹಾಗೂ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಇದ್ದರು.

# ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 24ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 34, 35 ಹುಡ್ಕೋ ಈ ಡಬ್ಲ್ಯೂ ಎಸ್, ಸಚ್ಚಿದಾನಂದ ಮಠದ ಲೈನ್, ಗಡ್ಡಿಯವರ ಲೈನ್, ನೀಲಮ್ಮ ತಾಯಿ ಮಠದ ಲೈನ್ 1,2 ನೇ ಕ್ರಾಸ್ ಗಳು, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 ಅಮರೇಶ್ವರ ನಗರ, ತಾಜನಗರ, ರಾಚೋಟೇಶ್ವರ ನಗರ, ಶರಣಪ್ಪರ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ15, 17 ಭಜಂತ್ರಿ ಓಣಿ, ಡಿಸಿ ಮಿಲ್ ಲೈನ್, ಮಹೇಂದ್ರಕರ್ ಸರ್ಕಲ್, ಗಾಂಧಿ ಸರ್ಕಲ್, ಅಂಗನವಾಡಿ ಲೈನ್, ಶುದ್ಧ ನೀರಿನ ಘಟಕದ ಲೈನ್, ಮೀನಿನ ಮಾರ್ಕೆಟ್, ಬಸವೇಶ್ವರ ಗುಡಿ ಲೈನ್, ಗಣಪತಿ ಗುಡಿ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ರಾಜೀವ ಗಾಂಧಿ ನಗರ 2, 4, 5 ನೇ ಕ್ರಾಸ್ ಗಳು, ಸಾಯಿ ನಗರ, ಸಾಯಿಬಾಬಾ ಗುಡಿ ಲೈನ್, ರಿಂಗ್ ರೋಡ್, ಜಾಲಿಹಾಳದವರ ಲೈನ್ ದೇವರಾಜ್ ಹಾಸ್ಟೆಲ್, ಪತಂಜಲಿ ಯೋಗದ ಲೈನ್, ಕಲಾಮಂದಿರ ರೋಡ್, ಚಂದಾವರಿ ಅವರ ಲೈನ್, ಪೊಲೀಸ್ ಸ್ಟೇಷನ್ ರಸ್ತೆ, ಉರ್ದು ಶಾಲೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 6 ಸಿದ್ದಲಿಂಗ ನಗರ 3 ಭಾಗಗಳು, ಕೂಟಗಿಯವರ 4 ಭಾಗಗಳು, ಚನ್ನಪ್ಪ ಗೌಡ್ರ ಲೈನ್. ವಾರ್ಡ್ ನಂ. 21, 22, 23 ಮಾನ್ವಿಯವರ ಲೈನ್, ಲಕ್ಕುಂಡಿಯವರ ಲೈನ್, ಅಕ್ಕಿಯವರ ಲೈನ್, ಬಾಳಿಕಾಯಿಯವರ ಲೈನ್, ಗೆಳೆಯರ ಬಳಗ, ಕಗನಳ್ಳಿ, ಹಾರೋಗೇರಿ, ಹೆಬಸೂರು, ಹೊನ್ನೆತ್ತೆಮ್ಮ ಭಾಗ -1,2 ಸೋಮನಗೌಡ್ರ ಲೈನ್, ಕಮತರ ಲೈನ್, ಈಟಿಯವರ ಲೈನ್, ಶಾಂತವ್ವನ ಅಡ್ಡೆದ ಲೈನ್, ಗೌಳಿಯವರ ಲೈನ್, ಅಂಗನವಾಡಿ ಬನ್ನಿ ಕಾಳಮ್ಮ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಕ್ಯಾನಿಂಗ್ ಕೇಂದ್ರ ಆರಂಭಿಸಲು ಒತ್ತಾಯ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸರ್ಕಾರದಿಂದ ಪ್ರತ್ಯೇಕ ಹೆರಿಗೆ ಆಸ್ಪತ್ರೆ, ಗರ್ಭಿಣಿಯರಿಗೆ ಸ್ಕ್ಯಾನಿಂಗ್ ಕೇಂದ್ರ ಆರಂಭಿಸಬೇಕು ಎಂದು ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಉಸ್ತುವಾರಿ ಎಚ್.ಎಂ. ಸಂತೋಷ ಒತ್ತಾಯಿಸಿದರು.

ಪಟ್ಟಣದ ತಾಲೂಕು ವೈದ್ಯಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿದ ಪಕ್ಷದ ಪದಾಧಿಕಾರಿಗಳು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿ ತಾಲೂಕು ವೈದ್ಯಾಧಿಕಾರಿ ಡಾ.ಹಾಲಸ್ವಾಮಿ ಅವರಿಗೆ ಮನವಿ ಸಲ್ಲಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಿಯಮದ ಅನ್ವಯ ಪ್ರತಿ ಗ್ರಾಮಗಳಿಗೆ ಒಂದು ಉಪಕೇಂದ್ರ ತೆರೆಯಬೇಕು. 26 ಗ್ರಾಮಗಳಿಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ, 121 ಗ್ರಾಮಗಳಿಗೆ ಸಮುದಾಯ ಆರೋಗ್ಯ ಕೇಂದ್ರ ತೆರೆಯಬೇಕು. 4 ಲಕ್ಷಕ್ಕಿಂತ ಅಧಿಕ ಜನಸಂಖ್ಯೆ ಹೊಂದಿರುವ ತಾಲೂಕಿನಲ್ಲಿ ಮಹಿಳೆಯರಿಗೆ ಪ್ರತ್ಯೇಕ ಹೆರಿಗೆ ಆಸ್ಪತ್ರೆ, ಗರ್ಭಿಣಿಯರಿಗೆ ಸ್ಕ್ಯಾನಿಂಗ್ ಕೇಂದ್ರದ ಅವಶ್ಯಕತೆ ಇದೆ ಎಂದರು.

ತಾಲೂಕು ಪ್ರಧಾನ ಕಾರ್ಯದರ್ಶಿ ಗುಡಿಹಳ್ಳಿ ಹಾಲೇಶ್ ಮಾತನಾಡಿದರು. ಸರ್ಕಾರಿ ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಯಂತ್ರ ಇಲ್ಲದೇ ಖಾಸಗಿ ಆಸ್ಪತ್ರೆಗಳಲ್ಲಿ ಸಾವಿರಾರು ರೂ ನೀಡಿ ಸ್ಕ್ಯಾನಿಂಗ್ ಮಾಡಿಸುವ ಪರಿಸ್ಥಿತಿಯಿದೆ. ಖಾಲಿ ಇರುವ ವೈದ್ಯರ ಹುದ್ದೆ ಶೀಘ್ರ ಭರ್ತಿ ಮಾಡಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು, ನರ್ಸ್ ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹ ನಿರ್ಮಿಸಬೇಕು ಎಂದು ಆಗ್ರಹಿಸಿದರು.

ಮುಖಂಡರಾದ ಬಳಿಗನೂರು ಕೊಟ್ರೇಶ್, ರಮೇಶ್ ನಾಯ್ಕ, ರಾಗಿಮಸಲವಾಡ ಹನುಮಂತಪ್ಪ, ಟಿ. ಬಸಮ್ಮ, ಎ.ಪಿ. ಪುಷ್ಪ, ವಿಶಾಲಮ್ಮ, ಡಿ.ಎಚ್. ಅರುಣ್, ಹಗರಿ ಗುಡಿಹಳ್ಳಿ ಶಿವರಾಜ್, ಎಚ್. ಬಸವರಾಜ್ ಇತರರಿದ್ದರು.

# ಕೇಂದ್ರ ಬಜೆಟ್ | ವಿತ್ತ ಸಚಿವರು ಕಾಂಗ್ರೆಸ್ ಪ್ರಣಾಳಿಕೆ ಓದಿರುವುದು ಖುಷಿ ತಂದಿದೆ: ಪಿ. ಚಿದಂಬರಂ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್ ಮಂಡಿಸಿದ ಬೆನ್ನಲ್ಲೇ ಪ್ರತಿಕ್ರಿಯಿಸಿದ ಕಾಂಗ್ರೆಸ್ ನಾಯಕ ಪಿ. ಚಿದಂಬರಂ "ಲೋಕಸಭೆ ಚುನಾವಣೆಯ ಫಲಿತಾಂಶದ ನಂತರ ವಿತ್ತ ಸಚಿವರು ಕಾಂಗ್ರೆಸ್‌ನ 2024ರ ಪ್ರಣಾಳಿಕೆ ಓದಿರುವುದು ನನಗೆ ಖುಷಿ ತಂದಿದೆ" ಎಂದಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಚಿದಂಬರಂ " ಕಾಂಗ್ರೆಸ್ ಪ್ರಣಾಳಿಕೆಯ ಪುಟ 30ರಲ್ಲಿ ವಿವರಿಸಿರುವ ಉದ್ಯೋಗಕ್ಕೆ ಉತ್ತೇಜನ ನೀಡುವ ವಿಚಾರವನ್ನು ಬಜೆಟ್‌ನಲ್ಲಿ ಅಳವಡಿಸಿಕೊಂಡಿದ್ದಾರೆ. ಇದು ನನಗೆ ಖುಷಿ ಕೊಟ್ಟಿದೆ. ಇದರ ಜೊತೆಗೆ ಕಾಂಗ್ರೆಸ್ ಪ್ರಣಾಳಿಕೆಯ ಪುಟ 11ರಲ್ಲಿ ಉಲ್ಲೇಖಿಸಿರುವ ಅಪ್ರೆಂಟಿಸ್‌ಗೆ ಭತ್ಯೆಯೊಂದಿಗೆ ಅಪ್ರೆಂಟಿಸ್‌ಶಿಪ್ ಯೋಜನೆಯನ್ನು ಪರಿಚಯಿಸಿದ್ದಾರೆ. ಕಾಂಗ್ರೆಸ್ ಪ್ರಣಾಳಿಕೆಯ ಇತರ ಕೆಲವು ಅಂಶಗಳನ್ನೂ ಸಚಿವರು ಬಜೆಟ್‌ನಲ್ಲಿ ನಕಲು ಮಾಡಿದ್ದಾರೆ. ಉಳಿದ ಅಂಶಗಳನ್ನು ನಾನು ಶೀಘ್ರದಲ್ಲೇ ಪಟ್ಟಿ ಮಾಡುತ್ತೇನೆ" ಎಂದು ಬರೆದುಕೊಂಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವ ವಹಿಸಿರುವ ಸರ್ಕಾರದ ಮೂರನೇ ಹಾಗೂ ಹಣಕಾಸು ಸಚಿವೆಯಾಗಿ 7ನೇ ಬಜೆಟ್ ಅನ್ನು ಇಂದು ನಿರ್ಮಲಾ ಸೀತಾರಾಮನ್ ಮಂಡಿಸಿದ್ದಾರೆ.

### ಗದಗ ಜಿಲ್ಲಾ ಕಸಾಪ ಸಾಹಿತ್ಯ ಸಿಂಚನದಲ್ಲಿ ಆಲೂರು ವೆಂಕಟರಾಯರ ಕುರಿತು ಉಪನ್ಯಾಸ

# ಕನ್ನಡಿಗರಲ್ಲಿ ಕೆಚ್ಚು ಮೂಡಿಸಿದ ಆಲೂರರು




■ವಿಜಯಸಾಕ್ಷಿ ಸುದ್ದಿ, ಗದಗ

ಹರಿದು ಹಂಚಿಹೋಗಿದ್ದ ಕನ್ನಡ ನೆಲವನ್ನು ಒಂದುಗೂಡಿಸಲು ಅವಿರತವಾಗಿ ಶ್ರಮಿಸಿ 'ಕನ್ನಡ ಕುಲಪುರೋಹಿತ'ರೆಂದು ಖ್ಯಾತರಾಗಿದ್ದವರು ಆಲೂರ ವೆಂಕಟರಾಯರು. ಕನ್ನಡಿಗರಲ್ಲಿ ಕೆಚ್ಚನ್ನು ಮೂಡಿಸಿ ಏಕೀಕರಣ ಹೋರಾಟಕ್ಕೆ ಹೊಸ ರೂಪವನ್ನು ನೀಡಿದರು. ಲೇಖನ, ನಾಟಕ, ಕೀರ್ತನಗಳ ಮೂಲಕ ಜಾಗೃತಿಯನ್ನು ಮೂಡಿಸಿದರು ಎಂದು ಬರಹಗಾರ ಬಿ.ಎಲ್. ಪತ್ತಾರ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ತೋಂಟದ ಶ್ರೀಗಳ ಕನ್ನಡ ಭವನದಲ್ಲಿ ಜರುಗಿದ 'ಸಾಹಿತ್ಯ ಸಿಂಚನ' ಮಾಲಿಕೆಯಲ್ಲಿ ಕನ್ನಡಕ್ಕೆ ಆಲೂರು ವೆಂಕಟರಾಯರ ಕೊಡುಗೆ ವಿಷಯದ ಕುರಿತು ಮಾತನಾಡಿದರು.

ಸ್ವಧರ್ಮ, ಸ್ವದೇಶಿ, ಸ್ವಭಾಷೆ ಹಾಗೂ ಸ್ವರಾಜ್ಯ ಇವುಗಳ ಹುಚ್ಚು ಹಿಡಿಸಿಕೊಂಡ ಆಲೂರರು ವಕೀಲಿ ವೃತ್ತಿಯನ್ನು ಬಿಟ್ಟು ಕರ್ನಾಟಕ ಏಕೀಕರಣಕ್ಕೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟರು. ಇತಿಹಾಸದಲ್ಲಿ ಆಸಕ್ತಿಯಿದ್ದ ಆಲೂರರು ಕರ್ನಾಟಕ ಇತಿಹಾಸ ಸಂಶೋಧನಾ ಮಂಡಳಿಯನ್ನು ಸ್ಥಾಪಿಸಿದರು. ಕರ್ನಾಟಕ ವಿದ್ಯಾವರ್ಧಕ ಸಂಘದ ಮುಖವಾಣಿಯಾಗಿದ್ದ 'ವಾಗ್ಭೂಷಣ' ಹಾಗೂ ಜಯಕರ್ನಾಟಕ ಪತ್ರಿಕೆಯ ಮೂಲಕ ಕನ್ನಡಿಗರ ಸ್ವಾಭಿಮಾನವನ್ನು ಬಡಿದೆಬ್ಬಿಸುವ ಲೇಖನವನ್ನು ಬರೆದು ಪ್ರಕಟಿಸಿದರು. 1915ರಲ್ಲಿ ಕರ್ನಾಟಕ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಲು ಕಾರಣೀಭೂತರಾದರು. ಶಿಕ್ಷಣ ಮಿಮಾಂಸೆ, ಕರ್ನಾಟಕ ಗತವೈಭವ, ಗೀತಾರಹಸ್ಯ, ರಾಷ್ಟ್ರೀಯತೆಯ ಮೀಮಾಂಸೆ, ನನ್ನ ಜೀವನ ಸ್ಮೃತಿಗಳು ಇವರ ಕೃತಿಗಳಾಗಿವೆ. ಕನ್ನಡ ನಾಡು-ನುಡಿಗೆ ಆಲೂರರು ನೀಡಿದ ಕೊಡುಗೆ ಅನನ್ಯವಾಗಿದೆಯೆಂದು ತಿಳಿಸಿದರು.

ಅತಿಥಿ ಎಚ್.ಟಿ. ಸಂಜೀವಸ್ವಾಮಿ ಮಾತನಾಡಿ, ನಿತ್ಯ ಬಳಸುವ ಇಂಗ್ಲೀಷ್ ಪದಗಳಿಗೆ ಕನ್ನಡದ ಪರ್ಯಾಯ ಪದಗಳನ್ನು ಪ್ರತಿವಾರ ಪರಿಚಯಿಸುವ ಕಾರ್ಯವಾಗಬೇಕು ಎಂದರಲ್ಲದೆ, ಮುಕ್ತ ಗ್ರಂಥಾಲಯವನ್ನು ಸ್ಥಾಪಿಸಲು ಸಲಹೆ ನೀಡಿದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು.

ಶ್ರೀಕಾಂತ ಬಡ್ದೂರ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ, ಪ್ರೊ. ಕೆ.ಎಚ್. ಬೇಲೂರ, ಸಿ.ಎಂ. ಮಾರನಬಸರಿ, ಪ್ರ.ತೋ. ನಾರಾಯಣಪೂರ, ಎಸ್.ಎಸ್. ಕಳಸಾಪುರಶೆಟ್ರು, ಪ್ರೊ. ಎಸ್.ಯು. ಸಜ್ಜನಶೆಟ್ಟರ್, ಎಸ್.ಎಸ್. ಸೂಳಿಕೇರಿ, ಶಶಿಕಾಂತ ಕೊರ್ಲಹಳ್ಳಿ, ರತ್ನಕ್ಕ ಪಾಟೀಲ, ಪದ್ಮಾ ಕಬಾಡಿ, ಮಂಜುಳಾ ವೆಂಕಟೇಶಯ್ಯ, ರಕ್ಷಿತಾ ಎಸ್. ಗಿಡ್ನಂದಿ, ರತ್ನಾ ಪುರಂತರ, ಸುಧಾ ಬಳ್ಳಿ, ಶೈಲಜಾ ಗಿಡ್ನಂದಿ, ಬಸವರಾಜ ಗಣಪ್ಪನವರ, ಎಸ್.ಎ. ಪಾಟೀಲ, ಜೆ.ಎ. ಪಾಟೀಲ, ಅಮರೇಶ ರಾಂಪೂರ ಮುಂತಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಆಲೂರು ವೆಂಕಟರಾಯರು ಮುಂಬೈದಲ್ಲಿ ವ್ಯಾಸಾಂಗ ಮಾಡುತ್ತಿರುವ ಸಂದರ್ಭದಲ್ಲಿಯೇ ಕನ್ನಡ ನಾಡು ನುಡಿಗೆ ಪಣ ತೊಟ್ಟರು. ಭಾಷಾಭಿಮಾನ ಮತ್ತು ದೇಶಾಭಿಮಾನವನ್ನು ಜೊತೆಯಾಗಿ ಮುನ್ನಡೆಸಿದರು ಎಂದು ತಿಳಿಸಿದರು.

## ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯಿಂದ ಗುರುಪೂರ್ಣಿಮೆ ಅಂಗವಾಗಿ ಶ್ರೀ ಸಾಯಿಬಾಬಾ ಮೂರ್ತಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಗಳು ಶ್ರದ್ಧಾಭಕ್ತಿಯೊಂದಿಗೆ ಜರುಗಿತು.

ಬೆಳಿಗ್ಗೆ 6 ಗಂಟೆಗೆ ಕಾಕಡಾರತಿ, 6.30 ನಂತರ ಮಂಗಲ ಸ್ನಾನ, ರುದ್ರಾಭಿಷೇಕ, ಅಲಂಕಾರ ಪೂಜೆ. ಮಧ್ಯಾನ್ಹ 12 ಗಂಟೆಗೆ ಪಂಚಾರತಿ ಹಾಗೂ ಸದ್ಭಕ್ತರಿಂದ ಪುಷ್ಪಾರ್ಚನೆ ನಂತರ ಅನ್ನಸಂತರ್ಪಣೆ ಜರುಗಿತು.

ಸಂಜೆ 5 ಗಂಟೆಗೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ, ಸೂರ್ಯಾಸ್ತಕ್ಕೆ ಧೂಪಾರತಿ ನಂತರ ಪಲ್ಲಕ್ಕಿ ಉತ್ಸವ, ರಾತ್ರಿ 10 ಗಂಟೆಗೆ ಶೇಜಾರತಿಯೊಂದಿಗೆ ಕಾರ್ಯಕ್ರಮಗಳು ಸಂಪನ್ನಗೊಂಡವು.

## ಬಿಜೆಪಿ ಸಂಘಟನಾ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಪಂಚಾಯತ್ ರಾಜ್ ಗ್ರಾಮೀಣ ಪ್ರಕೋಷ್ಠದ ಗದಗ ಜಿಲ್ಲಾ ಸಂಘಟನಾ ಸಭೆ ಜರುಗಿತು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಗ್ರಾಮೀಣ ಪ್ರಕೋಷ್ಠದ ರಾಜ್ಯ ಸಂಚಾಲಕ ಹನುಮಂತರಾವ್ ಜವಳಿ, ಬಿಜೆಪಿ ಜಿಲ್ಲಾ ಅಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪ್ರಕೋಷ್ಠಗಳ ಜಿಲ್ಲಾ ಸಂಯೋಜಕ ಶಶಿಧರ ದಿಂಡೂರ, ಸಹ ಸಂಯೋಜಕ ರಮೇಶ ಸಜ್ಜಗಾರ, ಜಿಲ್ಲಾ ಸಂಚಾಲಕ ಬಿ.ಎಸ್. ಚಿಂಚಲಿ, ಸಹ ಸಂಚಾಲಕರಾದ ನಾಗರಾಜ ಮದ್ದೂರ, ಮಂಜುನಾಥ ಹಳ್ಳೂರಮಠ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷರು, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿಗಳಾದ ಡಾ. ಬಸವರಾಜ ಬಳ್ಳಾರಿ ಅವರು ತಮ್ಮ ಜನ್ಮದಿನ ಆಚರಿಸಿಕೊಂಡರು. ಈ ಹಿನ್ನೆಲೆಯಲ್ಲಿ ಮಂಗಳವಾರ ಶ್ರೀ ವಿರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಡಾ. ಬಸವರಾಜ ಬಳ್ಳಾರಿ ದಂಪತಿಗಳನ್ನು ಸನ್ಮಾನಿಸಿ, ಗೌರವಿಸಿ ಆಶೀರ್ವದಿಸಿ ಗುರು ಕಾಣಿಕೆ ನೀಡಿದರು.

### ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಪುರಸ್ಕಾರ-3

# ವಿದ್ಯಾರ್ಥಿಗಳು ಇಷ್ಟಪಟ್ಟು ಕಲಿಯಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕಷ್ಟಪಟ್ಟು, ಇಷ್ಟಪಟ್ಟು ಅಭ್ಯಾಸ ಮಾಡಿದರೆ ಭವಿಷ್ಯದಲ್ಲಿ ತಾವು ಇಷ್ಟಪಟ್ಟಿದ್ದನ್ನು ಸಾಧಿಸಲು ಸಾಧ್ಯವಿದೆ. ಆದ್ದರಿಂದ ವಿದ್ಯಾರ್ಥಿಗಳು ಕಲಿಕೆಯಲ್ಲಿ ಕಲಿಯುವದನ್ನು ಮಾತ್ರ ಮಾಡಲಿ ಎಂದು ವೈದ್ಯೆ ಡಾ.ಅನುಪಮಾ ಪಾಟೀಲ ಅಭಿಪ್ರಾಯಪಟ್ಟರು.

ಅವರು ಸೋಮವಾರ ಗದಗ ತಾಲೂಕಿನ ಹುಲಕೋಟಿ ಗ್ರಾಮದ ಕೆ.ಎಚ್. ಪಾಟೀಲ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಜೀವನದಲ್ಲಿ ಹಣ ಮುಖ್ಯವಲ್ಲ, ಗುಣ ಮುಖ್ಯ. ಅಂತಹ ಗುಣ ಲಕ್ಷಣಗಳು ಶಿಕ್ಷಣದಿಂದ ಮಾತ್ರ ಬರಲು ಸಾಧ್ಯ. ವಿದ್ಯಾರ್ಥಿಗಳು ಚೆನ್ನಾಗಿ ಕಲಿಯಬೇಕು, ಆರೋಗ್ಯವನ್ನು ಚೆನ್ನಾಗಿ ಇಟ್ಟುಕೊಳ್ಳಬೇಕು. ಅಂದಾಗ ಮಾತ್ರ ಸದೃಢ ಆರೋಗ್ಯ ರೂಪುಗೊಳ್ಳುವದು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ಎಸ್.ಎ. ಖಾನ್ ಮಾತನಾಡಿ, ಪ್ರತಿಷ್ಠಾನವು ನಮ್ಮ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ ಪುರಸ್ಕರಿಸಿದ್ದು ಇತರೆ ವಿದ್ಯಾರ್ಥಿಗಳಿಗೆ ಸ್ಫೂರ್ತಿ ನೀಡಿದಂತಾಗಿದೆ ಎಂದರು.

ವೇದಿಕೆಯ ಮೇಲೆ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ, ಉಪಾಧ್ಯಕ್ಷ ಎಸ್.ಜಿ. ಅಣ್ಣಿಗೇರಿ, ಕಾರ್ಯದರ್ಶಿ ಶಿವಣ್ಣ ಕತ್ತಿ ಸಂದರ್ಭೋಚಿತವಾಗಿ ಮಾತನಾಡಿದರು.

ಶಾಲೆಯ ವಿದ್ಯಾರ್ಥಿಗಳಾದ ಆಸ್ಮಾ ಹರ್ಲಾಪೂರ, ಸ್ನೇಹಾ ಮಾಲಿಪಾಟೀಲ, ಸಾವಿತ್ರಿ ಹೊಸಮನಿ, ಶೃತಿ ತೋರಗಲ್ಲ, ವಿದ್ಯಾಶ್ರೀ ಲಕ್ಕಣ್ಣವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಪಿ.ಕೆ. ಅವರಡ್ಡಿ ಸ್ವಾಗತಿಸಿದರು ವಿ.ಬಿ. ಕಾರಿಕಾಯಿ ನಿರೂಪಿಸಿದರು. ಪಿ.ಪಿ. ಟಿಕಾರೆ ವಂದಿಸಿದರು.

ಬೆಳಹೊಡದಲ್ಲಿ: ಗದಗ ತಾಲೂಕಿನ ಬೆಳಹೊಡ ಗ್ರಾಮದ ಪಿ.ವ್ಹಿ. ಹೊಸಳ್ಳಿ ಸರಕಾರಿ ಪ್ರೌಢಶಾಲೆಯಲ್ಲಿ ನಡೆದ ಪ್ರತಿಭಾ ಪುರಸ್ಕಾರದ ಸಮಾರಂಭದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಪಿ.ವ್ಹಿ. ಮಲ್ಲನಗೌಡ್ರ ವಹಿಸಿದ್ದರು.

ವಿದ್ಯಾರ್ಥಿಗಳಾದ ಸಕ್ಕೂಬಾಯಿ ಕಡೆಮನಿ, ಸರಸ್ವತಿ ಯರಗುದ್ದಿ, ರುದ್ರಗೌಡ ಮಾಳವಾಡ, ಮಹ್ಮದ್‌ಯಾಸೀನ್ ಹೊಂಬಳ, ಅಶ್ವಿನಿ ಕೆರಿಯವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವೇದಿಕೆಯ ಮೇಲೆ ವೇದಿಕೆಯ ಮೇಲೆ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ, ಉಪಾಧ್ಯಕ್ಷ ಎಸ್.ಜಿ. ಅಣ್ಣಿಗೇರಿ, ಕಾರ್ಯದರ್ಶಿ ಶಿವಣ್ಣ ಕತ್ತಿ ಇದ್ದರು.

ವಿದ್ಯಾ ಕಾಲವಾಡ ಪ್ರಾರ್ಥಿಸಿದರು. ಎಂ.ಎಂ. ಧಾರವಾಡ ಸ್ವಾಗತಿಸಿದರು. ಶ್ರೀಕಾಂತ ಭಜಂತ್ರಿ ನಿರೂಪಿಸಿದರು. ಎಸ್.ಸಿ.ಲಮಾಣಿ ವಂದಿಸಿದರು. ನೇಹಾ ಖಟವಟೆ, ಲಕ್ಷ್ಮಮ್ಮ ಶಿರೂರ ಉಪಸ್ಥಿತರಿದ್ದರು.

ಅಂತೂರ ಬೆಂತೂರ ಗ್ರಾಮದ ಸರಕಾರಿ ಪ್ರೌಢಶಾಲೆ, ಶ್ಯಾಗೋಟಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು.

**ನಾಳೆ ಯಾವ ಶಾಲೆ**

ಜುಲೈ 24ರಂದು ಬುಧವಾರ ಮುಂಜಾನೆ 10.30ಕ್ಕೆ ಗದಗ ತಾಲೂಕಿನ ಸೊರಟೂರಿನ ಕರ್ನಾಟಕ ಪಬ್ಲಿಕ್ ಸ್ಕೂಲ್‌ದಲ್ಲಿ, ಮುಂಜಾನೆ 11.30ಕ್ಕೆ ಯಲಿಶಿರೂರ ಗ್ರಾಮದ ಸರಕಾರಿ ಗರ್ಲ್ಸ್ ಹೈಸ್ಕೂಲ್‌ನಲ್ಲಿ, ಮಧ್ಯಾಹ್ನ 2 ಗಂಟೆಗೆ ಶಿರುಂಜದ ಸರಕಾರಿ ಗರ್ಲ್ಸ್ ಹೈಸ್ಕೂಲ್‌ನಲ್ಲಿ ಹಾಗೂ ಮಧ್ಯಾಹ್ನ 3 ಗಂಟೆಗೆ ನಾಗಾವಿಯ ಸರಕಾರಿ ಹೈಸ್ಕೂಲ್‌ನಲ್ಲಿ ಪ್ರತಿಭಾ ಪುರಸ್ಕಾರ ನಡೆಯಲಿದೆ.

## ಶ್ರೀ ಜಲಾಶಂಕರದಲ್ಲಿ ಗುರುಪೂರ್ಣಿಮಾ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ನಾಗಾವಿ ತಾಂಡಾ ಕಪ್ಪತ್ತುಗುಡ್ಡಕ್ಕೆ ಹೊಂದಿಕೊಂಡಿರುವ ದಕ್ಷಿಣದ ಕಾಶಿ ಜಲಾಶಂಕರದಲ್ಲಿ ಗುರುಪೂರ್ಣಿಮಾ ಕಡ್ಲಿಗಡಬ ಹುಣ್ಣಿಮೆಯಂದು ಜಲಾಶಂಕರನಿಗೆ ಅಭಿಷೇಕ ಹಾಗೂ ಬಿಲ್ವಾರ್ಚನೆ ಮಹಾಮಂಗಳರಾತಿ ಅದ್ದೂರಿಯಾಗಿ ನೆರವೇರಿತು.

ಅಭಿಷೇಕ ಭಕ್ತಿಸೇವೆಯನ್ನು ರಾಘವೇಂದ್ರಸಾ ಬಾಳಾಸಾ ಮೆರವಾಡೆ, ಶ್ರೀಕಾಂತಸಾ ಮೇರವಾಡೆ, ವಿಷ್ಣು ಕಲಘಟಗಿ, ಸೋಮಶೇಖರ ಚಪ್ಪನಮಠ, ಶ್ರೀಶೈಲ ಅಜನಾಳ, ಮಂಜುನಾಥ ಗದಗಿನ, ಡಾ. ರಾಜಶೇಖರ ಬಳ್ಳಾರಿ, ಮಹಾಂತೇಶ ನಿಮ್ಮನಗುಂದಿಮಠ, ಶ್ರೀ ಸಿಂದ್ಯಾ ಗದಗ, ಸುರೇಶ ಬೂಜಪ್ಪ ಗುಡಿಮನಿ, ಜಲಾಶಂಕರ ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಗಣೇಶ ಪಾಂಡಪ್ಪ ಲಮಾಣಿ ಹಾಗೂ ಸರ್ವ ಸದಸ್ಯರು ಹಾಗೂ ಸುತ್ತಮುತ್ತಲಿನ ಜಲಾಶಂಕರ ಭಕ್ತಾಧಿಗಳು ಪಾಲ್ಗೊಂಡಿದ್ದರು. ಪೂಜಾ ವಿಧಿ ವಿಧಾನವನ್ನು ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ನೆರವೇರಿಸಿದರು.

### ಗುರುಪೂರ್ಣಿಮೆಯಂದು ಸಾಯಿಬಾಬಾ ಸನ್ನಿಧಿಯಲ್ಲಿ ಅಕ್ಷರಾಭ್ಯಾಸ ಕಾರ್ಯಕ್ರಮ

# ಅಕ್ಷರಾಭ್ಯಾಸ ಅತ್ಯಂತ ಶ್ರೇಷ್ಠ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ನಿಮಿತ್ತ ನೂರಾರು ಮಕ್ಕಳಿಗೆ ತಂದೆ-ತಾಯಿಯರ ಸಮ್ಮುಖದಲ್ಲಿ ಸಂಪ್ರದಾಯದಂತೆ ಶಾಸ್ತ್ರೋಕ್ತವಾಗಿ ಸಾಯಿಬಾಬಾ ಅವರ ಸನ್ನಿಧಿಯಲ್ಲಿ ಅಕ್ಷರಾಭ್ಯಾಸವನ್ನು ನೆರವೇರಿಸಲಾಯಿತು. ಸಾಯಿ ಮಂದಿರದ ಅಧ್ಯಕ್ಷರು ಹಾಗೂ ಪ್ರಧಾನ ಅರ್ಚಕರಾಗಿರುವ ಸಿದ್ದಲಿಂಗಯ್ಯಶಾಸ್ತ್ರಿಗಳು ಹಿರೇಮಠ ಮತ್ತು ಶಿವಾನಂದ ಶಾಸ್ತ್ರಿಗಳ ಸಾನ್ನಿಧ್ಯದಲ್ಲಿ ಯಶಸ್ವಿಯಾಗಿ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಷೋಡಶ ಸಂಸ್ಕಾರಗಳಲ್ಲಿ ಅಕ್ಷರಾಭ್ಯಾಸವೂ ಒಂದು. ಅಕ್ಷರ ಎಂಬ ಶಬ್ಧಕ್ಕೆ ನಾಶವಿಲ್ಲದಿರುವುದು ಎಂದರ್ಥ. ಅಭ್ಯಾಸವೆಂದರೆ ಆ ತತ್ವಕ್ಕೆ ತನ್ನನ್ನು ಅಭಿಮುಖವಾಗಿ ಇರಿಸಿಕೊಳ್ಳುವುದು. ಅಕ್ಷರಾಭ್ಯಾಸ ಅತ್ಯಂತ ಶ್ರೇಷ್ಠವಾದುದು. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುವ ಮೂಲಕ ಕಲಿಕೆಗೆ ಮುನ್ನುಡಿ ಬರೆಯಲಾಗುತ್ತಿದೆ ಎಂದು ಹೇಳಿದರು.

ಅಕ್ಷರಾಭ್ಯಾಸ ಒಂದು ಮಹತ್ವದ ಸಂಸ್ಕಾರವಾಗಿದ್ದು, ಪೋಷಕರು ತಮ್ಮ ಮಕ್ಕಳಿಗೆ ಆಸ್ತಿ ಮಾಡುವ ಬದಲು ಅಕ್ಷರ ಕಲಿಸಿದರೆ ಪೋಷಕರು ನೀಡುವ ಆಸ್ತಿಗಿಂದ 10 ಪಟ್ಟು ಆಸ್ತಿ ಸಂಪಾದನೆ ಮಾಡುವ ಶಕ್ತಿ ಬರುತ್ತದೆ. ಈ ಹಿನ್ನೆಲೆಯಲ್ಲಿ ಮಕ್ಕಳಿಗೆ ಶಾಲೆ ದೇವಾಲಯವಿದ್ದಂತೆ. ಈ ನಿಟ್ಟಿನಲ್ಲಿ ಸಾಯಿಬಾಬಾರ ಸನ್ನಿಧಿಯಲ್ಲಿ ಅಕ್ಷರಾಭ್ಯಾಸ ಕೈಗೊಳ್ಳುವ ಮೂಲಕ ಮಗುವಿಗೆ ಉತ್ತಮ ಸಂಪ್ರದಾಯವನ್ನು ಕಲಿಸಿ ಉಳಿಸಿ ಬೆಳೆಸುವ ಕಾರ್ಯವನ್ನು ಪಾಲಕರು ಮಾಡಬೇಕು. ಇಂತಹ ಪವಿತ್ರ ಕಾರ್ಯದಲ್ಲಿ ಪಾಲ್ಗೊಂಡ ಎಲ್ಲರಿಗೂ ಉತ್ತಮ ಸಂಸ್ಕಾರ ದೊರೆಯುವಂತಾಗಲಿ ಎಂದು ಹೇಳಿದರು.

ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದ ಮಕ್ಕಳು ಮತ್ತು ಪಾಲಕರು ತಮ್ಮ ತಮ್ಮ ಮಕ್ಕಳ ಅಕ್ಷರಾಭ್ಯಾಸಕ್ಕೆ ನಾಂದಿ ಹಾಡಿದರು. ಗುರುಪೂರ್ಣಿಯ ದಿನವಾಗಿದ್ದರಿಂದ ಎಲ್ಲರಿಗೂ ಉಚಿತವಾಗಿ ಅಕ್ಷರಾಭ್ಯಾಸದ ವ್ಯವಸ್ಥೆಯನ್ನು ಮಂದಿರದ ಕಮಿಟಿಯವರು ಮಾಡಿದ್ದು ವಿಶೇಷವಾಗಿತ್ತು.

ಅಕ್ಷರಾಭ್ಯಾಸದಲ್ಲಿ ಅರ್ಚಕರಾದ ಶಿವಾನಂದ ಶಾಸ್ತ್ರಿಗಳು, ಗುರುಸಿದ್ದಯ್ಯಶಾಸ್ತ್ರೀಗಳು, ಆನಂದಸ್ವಾಮಿಶಾಸ್ತ್ರೀಗಳು, ಪ್ರಸನ್ನ ಶಾಸ್ತ್ರೀಗಳು ಸೇರಿದಂತೆ ಅನೇಕರಿದ್ದರು.

### ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಹಾಮಂಗಲದಲ್ಲಿ ಡಾ.ಶೆಟ್ಟರ ನುಡಿ

# ನಂಬಿದ ಭಕ್ತರನ್ನು ಬಾಬಾ ಕೈಬಿಟ್ಟಿಲ್ಲ




■ವಿಜಯಸಾಕ್ಷಿ ಸುದ್ದಿ, ಗದಗ

ನಂಬಿ ಬಂದ ಭಕ್ತರನ್ನು ಶಿರಡಿ ಸಾಯಿಬಾಬಾ ಕೈಬಿಟ್ಟಿಲ್ಲ, ಬರಿಗೈಯಲ್ಲಿ ಕಳುಹಿಸಿಲ್ಲ. ಸಾಬಾ ಅವರ ಸಚ್ಚರಿತ್ರೆಯನ್ನು ಶ್ರದ್ಧಾಭಕ್ತಿಯಿಂದ ಪಠಿಸಿದರೆ ಫಲ ಪ್ರಾಪ್ತಿಯಾಗುವದು ಎಂಬುದನ್ನು ನಾವು ಹಲವಾರು ಸಂದರ್ಭ, ಸನ್ನಿವೇಶಗಳಿಂದ ತಿಳಿದಿದ್ದೇವೆ ಎಂದು ಗದುಗಿನ ಧಾರ್ಮಿಕ ಚಿಂತಕ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ಅವರು ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯಿಂದ ಗುರುಪೂರ್ಣಿಮೆ ಅಂಗವಾಗಿ ಏರ್ಪಡಿಸಿದ್ದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನವನ್ನು ಮಹಾಮಂಗಲಗೊಳಿಸಿ ಮಾತನಾಡಿದರು.

ಸಾಯಿಬಾಬಾ ಅವರ ಧುನಿ ನಿರ್ಮಾಣಕ್ಕಾಗಿ ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ 50 ಸಾವಿರ ರೂ, ಡಾ. ಎಸ್.ಬಿ. ಶೆಟ್ಟರ 50 ಸಾವಿರ ರೂ, ಡಾ. ಎಸ್.ಡಿ. ಯರಗೇರಿ 25 ಸಾವಿರ ರೂ, ರವಿ ಪ್ರಕಾಶ ರಡ್ಡಿ 25 ಸಾವಿರ ರೂ, ಅಕ್ಕಮಹಾದೇವಿ ಎಸ್.ಪಂಪನಗೌಡ್ರ 25 ಸಾವಿರ ರೂ ಹಾಗೂ ತಲಾ 11 ಸಾವಿರ ರೂ.ಗಳನ್ನು ನೀಡಿದ ವೀರಣ್ಣ ಕಡಗದ, ಪ್ರಭುಗೌಡ ತಲೇಗೌಡ್ರ, ಫಕ್ಕೀರಪ್ಪ ಹೋಳಿ, ಬೆಳಧಡಿ ಗ್ರಾಮದ ಡಾ.ಮಹಾಂತೇಶ ಸಜ್ಜನ, ಸಂಗವ್ವ ಐ. ಬುಳ್ಳಾ, ವ್ಹಿ.ಆರ್. ಕುಂಬಾರ, ಯೋಗೇಶ ಸಾವಕಾರ ಪರಿವಾರದವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಕಳೆದ 10 ದಿನಗಳಿಂದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಡಿದ ಡಾ. ಎಸ್.ಬಿ. ಶೆಟ್ಟರ ಹಾಗೂ ಆಶಾ ಶೆಟ್ಟರ ದಂಪತಿಗಳನ್ನು ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಪ್ರವಚನ ಮಾಲಿಕ ಕುರಿತು ಡಾ. ಶರಣಬಸವ ವೆಂಕಟಾಪೂರ, ಐ.ಕೆ. ಕಮ್ಮಾರ, ಅಂದಾನೆಪ್ಪ ವಿಭೂತಿ, ಕಡಣಿ ಶಾಸ್ತ್ರೀ ತಮ್ಮ ಅಭಿಪ್ರಾಯ ತಿಳಿಸಿದರು.

ಸಮಿತಿಯ ಅಧ್ಯಕ್ಷ ಮಹೇಶ ತಲೇಗೌಡ್ರ ಸ್ವಾಗತಿಸಿದರು. ಕಾರ್ಯದರ್ಶಿ ರವಿ ಚಿಂಚಲಿ ನಿರೂಪಿಸಿ ವಂದಿಸಿದರು.

ಪ್ರವಚನ ಮಾಲಿಕೆಯ ಪ್ರಸಾದ ಸೇವೆ ವಹಿಸಿಕೊಂಡಿದ್ದ ಡಾ. ಎಸ್.ಬಿ.ಶೆಟ್ಟರ, ಮಹೇಶಗೌಡ ತಲೇಗೌಡ್ರ, ಜಗದೀಶ ಜಿಗಜಿನ್ನಿ, ರಮೇಶ ನಂದಿಕೇಶ್ವರಮಠ, ಫಕ್ಕೀರಪ್ಪ ಹೋಳಿ, ಜಯಪ್ರಕಾಶ ಬೆಲ್ಲದ, ಕವಿತಾ ಕೃಷ್ಣರಡ್ಡಿ ಕೊಣ್ಣೂರ, ಶಾಂತಾದೇವಿ ಎಂ.ತುಪ್ಪದ, ಶರಣಗೌಡ ಪಾಟೀಲ ಪರಿವಾರವನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

## ಸಭೆಗೆ ಬಾರದ ಕೃಷಿ ಅಧಿಕಾರಿ: ರೈತರ ಆಕ್ರೋಶ



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ಕೃಷಿ ಹೊಂಡ ನಿರ್ಮಿಸಿಕೊಂಡಿರುವ ರೈತರ ಸಭೆಯನ್ನು ಅಯೋಜನೆ ಮಾಡಿದ್ದ ಕೃಷಿ ಇಲಾಖೆಯ ಅಧಿಕಾರಿಗಳೇ ಸಭೆಗೆ ಗೈರಾಗಿದ್ದರಿಂದ ರೈತರು ಆಕ್ರೋಶ ಹೊರಹಾಕಿದ ಘಟನೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಮಂಗಳವಾರ ನಡೆಯಿತು.

ಸರಕಾರ ಹೊಸದಾಗಿ ಕೃಷಿ ಹೊಂಡಗಳನ್ನು ನಿರ್ಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಿತ್ತು. ಆಯ್ಕೆಯಾದ ಪಲಾನುಭವಿಗಳು ಇಲಾಖೆಯ ನಿರ್ದೇಶನದಂತೆ ಕೃಷಿಹೊಂಡಗಳನ್ನು ನಿರ್ಮಿಸಿಕೊಂಡಿದ್ದರೂ ಸಹ ಸಹಾಯಧನ ಬಿಡುಗಡೆಯಾಗಿಲ್ಲ ಎಂದು ರೈತರು ಆರೋಪಿಸಿದ್ದರಿಂದ ಹಿರಿಯ ಅಧಿಕಾರಿ ರವೀಂದ್ರ ಪಾಟೀಲ ಸಭೆಯನ್ನು ಆಯೋಜನೆ ಮಾಡಿದ್ದರು.

ಮಂಗಳವಾರ ಬೆಳಿಗ್ಗೆ 10.30ಕ್ಕೆ ತಮ್ಮ ಕಚೇರಿಯಲ್ಲಿನ ಸಭಾಭವನದಲ್ಲಿ ಫಲಾನುಭವಿಗಳ ಸಭೆಯನ್ನು ಆಯೋಜಿಸಿದ್ದ ರವೀಂದ್ರ ಪಾಟೀಲರು ಮದ್ಯಾಹ್ನ 1 ಗಂಟೆ ಕಳೆದರೂ ಸಹ ಕಚೇರಿಯತ್ತ ಬರಲಿಲ್ಲ. ರೈತರು ದೂರವಾಣಿ ಮೂಲಕ ಅವರನ್ನು ಸಂಪರ್ಕಿಸಲು ಪ್ರಯತ್ನಿಸಿದರೂ ಕರೆ ಸ್ವೀಕರಿಸದೆ ಇರುವುದು ರೈತರ ಆಕ್ರೋಶಕ್ಕೆ ಕಾರಣವಾಗಿತ್ತು. ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡಿದ್ದರೂ ಸಬ್ಸಿಡಿ ಹಣ ಪಾವತಿಸುತ್ತಿಲ್ಲ. ಈ ವಿಷಯವಾಗಿ ಅಧಿಕಾರಿಗಳೇ ಫಲಾನುಭವಿಗಳ ಸಭೆಯನ್ನು ಕರೆದು ಅವರೇ ಬಂದಿಲ್ಲ ಎಂದು ರೈತರು ಆಕ್ರೋಶ ಹೊರಹಾಕಿದರು.

ಮಹಿಳಾ ಸಿಬ್ಬಂದಿ ಆಕ್ರೋಶಗೊಂಡ ರೈತರನ್ನು ಸಮಾಧಾನಪಡಿಸಲು ಯತ್ನಿಸಿದರೂ ಸಹ ರೈತರು ಅಧಿಕಾರಿಗಳೇ ಇಲ್ಲದೆ ನೀವೇನು ಮಾಡುತ್ತಿರಿ ಎಂದು ಸಭೆಯಿಂದ ನಿರ್ಗಮಿಸಿದರು. ರೈತರಾದ ಬಸವರಾಜ ಅಂಗಡಿ, ಸುಭಾಸ ಮಂಗಳೂರ, ಸಂಗಪ್ಪ ಕಂಬಳಿ, ಎಸ್.ಎಂ. ಮುಲ್ಲಾ ಇದ್ದರು.

ವಿಕಸಿತ ಭಾರತ ಮಾಡುವ ಅಭಿವೃದ್ಧಿ ಪರವಾದ ಬಜೆಟ್: ಬಸವರಾಜ ಬೊಮ್ಮಾಯಿ

# ಭವಿಷ್ಯದ ಯುವಕರ ಬಜೆಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ/ಹಾವೇರಿ



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಕೇಂದ್ರದ ಬಜೆಟ್ ಭವಿಷ್ಯದ ಯುವಕರ ಬಜೆಟ್ ಆಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಕೇಂದ್ರದ ಬಜೆಟ್ ಮಂಡನೆಯ ನಂತರ ನವ ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಹತ್ತು ವರ್ಷದ ಆರ್ಥಿಕತೆಯ ಸುಧಾರಣೆಯಿಂದ ವಿಶ್ವದಲ್ಲಿಯೇ ಭಾರತ ಬೆಳೆಯುತ್ತಿರುವ ರಾಷ್ಟ್ರ ಎನ್ನುವುದನ್ನು ಈ ಬಜೆಟ್ ತೋರಿಸುತ್ತದೆ. ಹಣದುಬ್ಬರ ಸೀಮಿತಗೊಳಿಸಿರುವುದು, ಹೆಚ್ಚು ಜನರಿಗೆ ಕೆಲಸ ಕೊಡಿಸುವ ನಿಟ್ಟಿನಲ್ಲಿ ಅಭಿವೃದ್ಧಿ ಪರವಾದ ಬಜೆಟ್ ಇದಾಗಿದೆ ಎಂದು ಹೇಳಿದರು.

ಬಜೆಟ್‌ನಲ್ಲಿ ಕೃಷಿ ವಲಯಕ್ಕೆ 1.5 ಲಕ್ಷ ಕೋಟಿ, ಉದ್ಯೋಗ, ಕೌಶಲ್ಯಾಬಿವೃದ್ಧಿಗೆ 1.5 ಲಕ್ಷ ಕೋಟಿ, ಮುದ್ರಾ ಯೋಜನೆಯಲ್ಲಿ ಸಾಲ ನೀಡುವ ಪ್ರಮಾಣವನ್ನು 10 ಲಕ್ಷದಿಂದ 20 ಲಕ್ಷಕ್ಕೆ ಹೆಚ್ಚಳ ಮಾಡಿರುವುದು, ಗ್ರಾಮೀಣಾಭಿವೃದ್ಧಿ ಅಭಿವೃದ್ಧಿಗೆ 1 ಲಕ್ಷ ಕೋಟಿ, ಬಡವರಿಗೆ 3 ಕೋಟಿ ಮನೆ ಕೊಡುವುದು, ಕೃಷಿ ವಲಯಕ್ಕೆ ಬಹಳ ಒತ್ತು ಕೊಟ್ಟಿದ್ದು, ಕೃಷಿ ಉತ್ಪಾದನೆ ಹೆಚ್ಚಳ ಮತ್ತು ಸಂಸ್ಕರಣೆಗೆ ಆದ್ಯತೆ ನೀಡಿದ್ದಾರೆ ಎಂದು ಹೇಳಿದರು.

ವಿಶೇಷವಾಗಿ ಸಣ್ಣ ಕೈಗಾರಿಕೆಗೆ ಹೆಚ್ಚಿನ ಒತ್ತು ಕೊಟ್ಟಿದ್ದಾರೆ. ಸೇವಾ ವಲಯವೂ ದೊಡ್ಡ ಪ್ರಮಾಣದಲ್ಲಿ ಬೆಳೆಯಲು ಅನುಕೂಲ ಮಾಡಿಕೊಟ್ಟಿದ್ದಾರೆ. ಮೂರು ವಲಯದಲ್ಲಿ ಹೆಚ್ಚಿಗೆ ಹಣ ಹೂಡಿಕೆ ಮಾಡಲು ದೇಶದ ಆರ್ಥಿಕತೆಯನ್ನು ಇನ್ನಷ್ಟು ಗಟ್ಟಿಗೊಳಿಸುವ ಕೆಲಸ ಮಾಡುತ್ತಿದ್ದಾರೆ. ಸಾಮಾಜಿಕ ವಲಯಗಳಾದ ಶಿಕ್ಷಣ, ಆರೋಗ್ಯ ಉದ್ಯೋಗಕ್ಕೆ ಹೆಚ್ಚಿನ ಹಣ ನೀಡಿರುವುದು ಸ್ವಾಗತಾರ್ಹ ವಿಷಯ. ಮೂಲ ಸೌಕರ್ಯ ಅಭಿವೃದ್ಧಿಗೆ ಕಳೆದ ಬಾರಿಗಿಂತ ಹೆಚ್ಚು ಹಣ ನೀಡಿದ್ದಾರೆ. ಮಹಿಳೆಯ ಸಬಲೀಕರಣಕ್ಕೆ ವಿಶೇಷ ಕಾನೂನು ಮಾಡಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ ಎಂದರು.

ಸಾಮಾನ್ಯ ಜನರ ತೆರಿಗೆ ಕಡಿಮೆ ಮಾಡಿದ್ದು, ಮೂರು ಲಕ್ಷದವರೆಗೂ ಯಾವುದೇ ತೆರಿಗೆಯಿಲ್ಲ. ಮೂರು ಲಕ್ಷದಿಂದ 7 ಲಕ್ಷದವರೆಗೆ ಶೇ 5ರಷ್ಟು ತೆರಿಗೆ ವಿಧಿಸಿ ತೆರಿಗೆ ಕಡಿಮೆ ಮಾಡಿದ್ದಾರೆ. ಇದರಿಂದ ಮಧ್ಯಮ ವರ್ಗದ ಜನರಿಗೆ ಅನುಕೂಲವಾಗಲಿದೆ. ಎಲ್ಲಕ್ಕಿಂತ ಹೆಚ್ಚಾಗಿ ಆರ್ಥಿಕ ಶಿಸ್ತು ಕಾಪಾಡಿರುವುದು ಮುಖ್ಯವಾಗಿದೆ. ವಿದೇಶಿ ನೇರ ಬಂಡವಾಳ ಹೆಚ್ಚಿನ ಪ್ರಮಾಣದಲ್ಲಿ ಹರಿದು ಬರುವಂತೆ ಅನುಕೂಲ ಮಾಡಿದ್ದು, ಸರ್ಕಾರದ ಸಾಲ ಕಡಿಮೆ ಮಾಡಿದ್ದು, ಮುಂದಿನ ದಿನಗಳಲ್ಲಿ ದೊಡ್ಡ ಬದಲಾವಣೆಗೆ ಕಾರಣವಾಗಲಿದೆ. ಇದು ಭವಿಷ್ಯದ ಭಾರತದ ಯುವಕರ ಬಜೆಟ್ ಆಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

# ಕರ್ನಾಟಕ ನಿರ್ಲಕ್ಷಿತ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಮಂಗಳವಾರ ಕೇಂದ್ರ ಸರ್ಕಾರ ಘೋಷಿಸಿದ ಬಜೆಟ್ ಕರ್ನಾಟಕ ನಿರ್ಲಕ್ಷಿತ ಬಜೆಟ್ ಆಗಿದ್ದು, ಚುನಾವಣಾ ಪ್ರಣಾಳಿಕೆ ಪಾಲಿಸಲಾಗದೆ 'ಎನ್ನ ನಡೆಯೊಂದು ಪರಿ ಎನ್ನ ನುಡಿಯೊಂದು ಪರಿ' ಎಂಬಂತೆ ಆಚರಣೆ ರಹಿತವಾಗಿದೆ ಎಂದು ಪ್ರೊ. ಶಕುಂತಲಾ ಚನ್ನಪ್ಪ ಸಿಂಧೂರ ಅಭಿಪ್ರಾಯಪಟ್ಟಿದ್ದಾರೆ.

ಸಮಾನತೆಯ ಮಾನವೀಯತೆ ವಂಚಿತವಾದುದು ಚಿಂತನಾರ್ಹ, ಖಂಡನಾರ್ಹ. ಮೂಗಿಗೆ ತುಪ್ಪ ಸವರದೆ ಕರ್ನಾಟಕಕ್ಕೆ ಆದ್ಯತೆ ಯಾವಾಗ ಎಂಬುದು ಮರೀಚಿಕೆಯಾಗಿರುವುದು ವಿಷಾದಕರ ಸಂಗತಿಯೇ ಸರಿ ಎಂದಿದ್ದಾರೆ.

# ಶ್ರೀ ಜಯತೀರ್ಥರ ಆರಾಧನಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ




ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆ ವತಿಯಿಂದ ಜುಲೈ 24ರಿಂದ 26ರವರೆಗೆ ಮೂರು ದಿನಗಳ ಕಾಲ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀ ಜಯತೀರ್ಥರ ಆರಾಧನಾ ಮಹೋತ್ಸವ ಜರುಗಲಿದೆ.

ಪ್ರತಿದಿನ ಸಾಯಂಕಾಲ 6-30ರಿಂದ ಪಂ. ಶ್ರೀ ವರದರಾಜಾಚಾರ್ಯ ಜಾಲಿಹಾಳ ಇವರಿಂದ ಶ್ರೀ ಜಯತೀರ್ಥರ ಚರಿತ್ರೆ ಹಾಗೂ ಕೃತಿಗಳು ವಿಷಯ ಕುರಿತು ಪ್ರವಚನ, ಪ.ಪೂ.ಪಂ. ಶ್ರೀ ಪಾಂಡುರಂಗಾಚಾರ್ಯ ಹುನಗುಂದ ಇವರ ಸಾನಿಧ್ಯದಲ್ಲಿ ಜರುಗಲಿದೆ.

ಜು. 25ರಂದು ಮಧ್ಯಾರಾಧನೆ ನಿಮಿತ್ತ ಬೆಳಿಗ್ಗೆ 6-30ಕ್ಕೆ ಜಯತೀರ್ಥ ಸ್ತುತಿ, ಅಷ್ಟೋತ್ತರ ಶತಪಾರಾಯಣ ನಂತರ 8-30ಕ್ಕೆ ಜಯತೀರ್ಥರ ಭಾವಚಿತ್ರ ಹಾಗೂ ಗ್ರಂಥಗಳ ಮೆರವಣಿಗೆ, ಪಾಲಕಿ ಸೇವೆ, ಅಷ್ಟಾವಧಾನ ಸೇವೆ, ಮಂಗಳಾರತಿ, ಮುಂತಾದ ಕಾರ್ಯಕ್ರಮಗಳು ಜರುಗಲಿದ್ದು, ಸದ್ಭಕ್ತರು ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಶ್ರೀ ಜಯತೀರ್ಥರ ಪರಮಾನುಗ್ರಹಕ್ಕೆ ಪಾತ್ರರಾಗುವಂತೆ ಶ್ರೀ ವಿಶ್ವಮಧ್ವ ಮಹಾಪರಿಷತ್‌ನ ಪ್ರಕಟಣೆ ಕೋರಿದೆ.

ಸುರಕ್ಷಿತ ಕಟ್ಟಡಕ್ಕೆ ಮಹಿಳಾ ಕಾಲೇಜಿನ ಬೋಧನಾ ವರ್ಗಗಳ ಸ್ಥಳಾಂತರ

# ಜಿಲ್ಲಾಧಿಕಾರಿಗೆ ವಿದ್ಯಾರ್ಥಿನಿಯರಿಂದ ಗೌರವ ಅರ್ಪಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಳೆದ ಮೂರನಾಲ್ಕು ವರ್ಷದಿಂದ ವರ್ಗ ಕೋಣೆಗಳ ಸೋರಿಕೆಯಿಂದ ಸಮಸ್ಯೆ ಆಗಿದ್ದ ನಗರದ ಸರಕಾರಿ ಮಹಿಳಾ ಕಾಲೇಜಿಗೆ ಪರ್ಯಾಯ ವ್ಯವಸ್ಥೆ ಮಾಡಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಂಗಳವಾರ ಬೆಳಿಗ್ಗೆ ಭೇಟಿ ನೀಡಿ ಪರಿಶೀಲಿಸಿದರು.

ನಗರದ ಆರ್.ಎನ್. ಶೆಟ್ಟಿ ಕ್ರೀಡಾಂಗಣದ ಹತ್ತಿರವಿರುವ ಸರಕಾರಿ ಮಹಿಳಾ ಪದವಿ ಕಾಲೇಜು ಕಟ್ಟಡ ಶತಮಾನದಷ್ಟು ಹಳೆಯದಾಗಿರುವದರಿಂದ ಬೋಧನಾ ಕೊಠಡಿಗಳು ಸೋರುತ್ತಿತ್ತು. ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಜುಲೈ 19ರಂದು ಭೇಟಿ ನೀಡಿ, ಎಲ್ಲ ಕ್ಲಾಸ್ ರೂಮ್‌ಗಳನ್ನು ಸ್ವತಃ ಪರಿಶೀಲಿಸಿದ್ದರು.

ಕಟ್ಟಡದಲ್ಲಿನ ವರ್ಗಕೋಣೆಗಳು ಅಪಾಯದ ಸ್ಥಿತಿಯಲ್ಲಿ ಇರುವುದನ್ನು ಮನಗಂಡು, ಜಿಲ್ಲಾಧಿಕಾರಿಗಳು ಪರ್ಯಾಯ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಿದ್ದರು. ನಂತರ ಜಿಲ್ಲಾಧಿಕಾರಿಗಳು, ಅಂದೇ ಡೈಯಟ್ ಕಟ್ಟಡ, ಟಿಸಿಡಬ್ಲ್ಯೂ ಕಾಲೇಜ ಕಟ್ಟಡ ಮತ್ತು ಕವಿವಿ ಯುಪಿಎಸ್ ಶಾಲಾ ಕಟ್ಟಡಗಳನ್ನು ಪರಿಶೀಲಿಸಿದರು. ನಂತರ ಕವಿವಿ ಯುಪಿ ಶಾಲಾ ಕಟ್ಟಡಕ್ಕೆ, ಡೈಯಟ್ ಆವರಣದ ಕಟ್ಟಡಗಳಿಗೆ ಹಾಗೂ ಆಲೂರು ಸರ್ಕಲ್‌ನಲ್ಲಿರುವ ಟಿಸಿಡಬ್ಲ್ಯೂ ಕಟ್ಟಡಗಳಿಗೆ ಭೇಟಿ ನೀಡಿ, ಅಲ್ಲಿನ ಮುಖ್ಯಸ್ಥರೊಂದಿಗೆ ಚರ್ಚಿಸಿ, ಕೊಠಡಿ ಲಭ್ಯತೆ ಬಗ್ಗೆ ಮಾಹಿತಿ ಪಡೆದರು.

ನಂತರ ಕವಿವಿ ಕುಲಪತಿ, ಕುಲಸಚಿವರೊಂದಿಗೆ ಚರ್ಚಿಸಿ, ಯುಪಿಎಸ್ ಶಾಲೆ ಆವರಣದ ಕೊಠಡಿಗಳಿಗೆ ಸ್ಥಳಾಂತರ ಮಾಡಲು ನಿರ್ಧರಿಸಲಾಯಿತು. ಅದರಂತೆ



ಆರ್.ಎನ್. ಶೆಟ್ಟಿ ಕ್ರೀಡಾಂಗಣದ ಹತ್ತಿರದ ಕಟ್ಟಡದಲ್ಲಿ ಸೋರಿಕೆಯಿಂದ ಸಮಸ್ಯೆ ಆಗುತ್ತಿದ್ದ ಎಲ್ಲ ಭೋದನಾ ವರ್ಗಗಳನ್ನು ಯುಪಿಎಸ್ ಶಾಲೆ ಕಟ್ಟಡದಲ್ಲಿ ಆರಂಭಿಸಲಾಯಿತು.

ವಿದ್ಯಾರ್ಥಿಗಳ ಆಹ್ವಾನದ ಮೇರೆಗೆ ಜಿಲ್ಲಾಧಿಕಾರಿಗಳು ಮಂಗಳವಾರ ಬೆಳಿಗ್ಗೆ ಭೇಟಿ ನೀಡಿ, ಪ್ರತೀ ಬೋಧನಾ ಕೊಠಡಿಗೆ ತೆರಳಿ ವಿದ್ಯಾರ್ಥಿನಿಯರನ್ನು ಮಾತನಾಡಿಸಿದರು. ಭರವಸೆಯಂತೆ ಕಾಲಮಿತಿಯಲ್ಲಿ ಕಾರ್ಯ ಮಾಡಿದ ಡಿಸಿ ಅವರನ್ನು ವಿದ್ಯಾರ್ಥಿನಿಯರು ಸನ್ಮಾನಿಸಿ, ಗೌರವಿಸಿದರು. ನಂತರ ಮಾತನಾಡಿದ ಜಿಲ್ಲಾಧಿಕಾರಿಗಳು, ವಿದ್ಯಾರ್ಥಿಗಳು ತಮ್ಮ ಪ್ರತಿಭೆಗೆ ತಕ್ಕಂತೆ ಶ್ರಮ ಹಾಕಬೇಕು. ಓದುವ ಸ್ಥಳದಲ್ಲಿ ಬೆಳಕು, ಗಾಳಿ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ ಎಂದರು.

ಸರಕಾರಿ ಮಹಿಳಾ ಕಾಲೇಜು ನೂತನ ಕಟ್ಟಡ ಕಾಮಗಾರಿ ಶೀಘ್ರ ಆರಂಭಿಸಲು ಕ್ರಮವಹಿಸಲಾಗಿದೆ. ಉಸ್ತುವಾರಿ ಸಚಿವರ ಮತ್ತು ಸ್ಥಳೀಯ ಶಾಸಕರ ಮುತುವರ್ಜಿಯಿಂದ ಕಟ್ಟಡಕ್ಕೆ ಅನುದಾನ ಮಂಜೂರಾಗಿದ್ದು, ಕೆಎಚ್‌ಬಿ ಅವರಿಗೂ ಬೇಗ ಕಾಮಗಾರಿ ಪೂರ್ಣಗೊಳಿಸಲು ನಿರ್ದೇಶನ ನೀಡಿದ್ದಾರೆ. ತ್ವರಿತವಾಗಿ ಕಾಮಗಾರಿ ಆರಂಭವಾಗುವಂತೆ ಸಮನ್ವಯ ಸಾಧಿಸಲು ಕಾಲೇಜು ಪ್ರಾಚಾರ್ಯರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಕಾಲೇಜು ಪ್ರಾಚಾರ್ಯ ಡಾ. ಎಸ್. ಎಸ್. ಅಂಗಡಿ ಅಧ್ಯಕ್ಷತೆ ವಹಿಸಿದ್ದರು. ಡಾ.ಸರಸ್ವತಿ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಯುಪಿಎಸ್ ಶಾಲೆಯ ಮುಖ್ಯಾಧ್ಯಾಪಕಿ ನಾಯಕ, ಮಹಿಳಾ ಕಾಲೇಜು ಅಧ್ಯಾಪಕರು, ಕಲಾ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು, ಸಿಬ್ಬಂದಿಗಳು ಭಾಗವಹಿಸಿದ್ದರು.

ಕಾಲೇಜು ಜೀವನವೆಂದರೆ, ವಿದ್ಯಾರ್ಥಿಗಳಲ್ಲಿ ಕನಸು ಕಾಣುವ ಕಾಲ. ಇದರೊಂದಿಗೆ ಸಾಧನೆ ಮಾಡುವ ಛಲ ಹೊಂದುವ ವಯಸ್ಸು. ಆದ್ದರಿಂದ ಮೊಬೈಲ್, ಗ್ಯಾಜೆಟ್‌ಗಳ ಮೊರೆ ಹೋಗದೆ, ಶ್ರಮಪಟ್ಟು ಓದಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ 'ಪುಲಿಗೆರೆ ಪೌರ್ಣಿಮೆ'

# ಗುರು ಸದಾ ಸ್ಮರಣೀಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಜಗತ್ತಿನ ಶ್ರೇಷ್ಠ ಋಷಿಮುನಿಗಳಾಗಿದ್ದ ವೇದವ್ಯಾಸ ಮಹರ್ಷಿಗಳು ಹುಟ್ಟಿದ ದಿನವಾಗಿರುವ ಈ ಪೌರ್ಣಿಮೆಯನ್ನು ಗುರುಪೌರ್ಣಿಮೆಯಾಗಿ ಆಚರಿಸುವ ಮೂಲಕ ಗುರುವಿನ ಸ್ಮರಣೆ ಮಾಡಿಕೊಳ್ಳಲಾಗುತ್ತಿದೆ. ವ್ಯಕ್ತಿಯ ಬದುಕಿಗೆ ಸಂಸ್ಕಾರ, ಸದ್ವಿಚಾರ, ಸುಜ್ಞಾನ, ಸತ್ ಸಂಪ್ರದಾಯ, ಮಾನವೀಯ ಮೌಲ್ಯಗಳನ್ನು ಬಿತ್ತಿ ಉತ್ತಮ ನಾಗರಿಕರನ್ನಾಗಿ ಮಾಡುವ ಗುರು ಸದಾ ಸ್ಮರಣೀಯ ಎಂದು ಶಿಕ್ಷಕಿ/ಸಾಹಿತಿ ನಿರ್ಮಲಾ ಅಡವಿ ಹೇಳಿದರು.

ಅವರು ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ನಡೆಯುವ 'ಪುಲಿಗೆರೆ ಪೌರ್ಣಿಮೆ' ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುತ್ತಿದ್ದರು.

ವೇದವ್ಯಾಸರ ಜನ್ಮದಿನವಾದ ಆಷಾಢ ಮಾಸದ ಶುಕ್ಲ ಪಕ್ಷದ ಪೌರ್ಣಿಮಿ ದಿನವನ್ನು ಗುರು ಪೌರ್ಣಿಮಿ ಎಂದು ಕರೆಯಲಾಗುತ್ತದೆ. ಏಕಲವ್ಯ ತನ್ನ ಗುರುಗಳಾದ ದ್ರೋಣಾಚಾರ್ಯರಿಗೆ ತನ್ನ ಬಲಗೈ ಹೆಬ್ಬೆರಳು ಗುರು ಕಾಣಿಕೆಯಾಗಿ ನೀಡಿದ ದಿನವಿದು. ಶಿವನು ಸಪ್ತ ಋಷಿಗಳಿಗೆ ಯೋಗಾಭ್ಯಾಸ ಮಾಡಿಸಿದ ದಿನ ಬೌದ್ಧ ಧರ್ಮದ ಗುರುಗಳಾದ ಗೌತಮ ಬುದ್ಧರು ತನ್ನ ಅನುಯಾಯಿಗಳಿಗೆ ಪ್ರಥಮ ಬೋಧನೆ ನೀಡಿದ ಶ್ರೇಷ್ಠ ದಿನವೂ ಇದಾಗಿದೆ ಎಂದರು.

ಚಂಬಣ್ಣಾ ಬಾಳಿಕಾಯಿ ಅಧ್ಯಕ್ಷತೆ ವಹಿಸಿದ್ದರು. ಮಂಜುಳಾ ಓದುನವರ, ಪಾರ್ವತಿ ಕಳ್ಳಿಮಠ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ವಿರೂಪಾಕ್ಷಪ್ಪ ಆದಿ, ಬಸವರಾಜ ಪುತಾಣಿ, ನೀಲಪ್ಪ ಕರ್ಜಕ್ಕಣ್ಣನವರ, ಎನ್.ಆರ್. ಸಾತಪೂತೆ, ಬಿ.ಎಸ್. ಈಳಗೇರ, ಎಚ್.ಜಿ. ದುರಗಣ್ಣವರ, ಸೋಮಣ್ಣ ಅಣ್ಣಿಗೇರಿ, ವೀರಣ್ಣ ಅಕ್ಕೂರ, ಸಂತೋಷ ಸಾತಪೂತೆ, ಪಿ.ಸಿ. ಕಾಳಶೆಟ್ಟಿ, ಶ್ರೀಪಾಲ ಗೊಂಗಡಿ, ಬಸವರಾಜ ಹೆಬ್ಬಾಳ, ಬಸವರಾಜ ಮೆಣಸಿನಕಾಯಿ, ಎನ್.ಎ. ತಹಸೀಲ್ದಾರ, ಎನ್.ಎಸ್. ಗೊರವರ, ಮಾಲಾ ದಂಧರಗಿ, ಸುಮಾ ಚೊಟಗಲ್, ವಿ.ಎಫ್. ಯಲಿಶಿರೂರ ಉಪಸ್ಥಿತರಿದ್ದರು. ಸೋಮಶೇಖರ ಕೆರಿಮನಿ, ಜಯಪ್ರಕಾಶ ಹೊಟ್ಟಿ, ಸ್ನೇಹಾ ಹೊಟ್ಟಿ, ಜಿ.ಎಸ್. ಗುಡಗೇರಿ ನಿರ್ವಹಿಸಿದರು.

ಸಿ.ಡಿ.ಪಿ.ಓ ಮೃತ್ಯಂಜಯ ಗುಡ್ಡದಾನ್ವೇರಿ ಮಾತನಾಡಿದರು. ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ನೀಡಿದ 'ಕಾಯಕ ರತ್ನ' ರಾಜ್ಯ ಮಟ್ಟದ ಪ್ರಶಸ್ತಿ ಪುರಸ್ಕೃತ ವಿಶ್ರಾಂತ ಶಿಕ್ಷಕ ಪೂರ್ಣಾಜಿ ಖರಾಟೆಯವರನ್ನು ಶ್ರೀಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯವರು ಮತ್ತು ಲಕ್ಷ್ಮೇಶ್ವರ ತಾಲೂಕಾ ವೈಜ್ಞಾನಿಕ ಸಂಶೋಧನಾ ಪರಿಷತ್ ಘಟಕದ ಎಲ್ಲ ಪದಾಧಿಕಾರಿಗಳು ಸನ್ಮಾನಿಸಿದರು.

# ಮಳಿಗೆ ತೆರವಿಗೆ 15 ದಿನಗಳ ಗಡುವು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಭರಮದೇವರ ವೃತ್ತದ ಬಳಿ ಇರುವ ಪುರಸಭೆ ಜಾಗೆಯಲ್ಲಿ ಅಕ್ರಮವಾಗಿ ಮಳಿಗೆಗಳನ್ನು ನಿರ್ಮಾಣ ಮಾಡುತ್ತಿರುವ ಕುರಿತು ಹಿಂದೂ ಸಂಘಟನೆಗಳು ವಿರೋಧ ವ್ಯಕ್ತಪಡಿಸಿದ್ದವು. ಮಂಗಳವಾರ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಅರ್ಪಿಸಿ ಅಕ್ರಮ ಮಳಿಗೆಗಳನ್ನು ತೆರವುಗೊಳಿಸಲು 15 ದಿನಗಳ ಗಡುವು ನೀಡಿದ್ದು, ಮಳಿಗೆಯ ನಿರ್ಮಾಣವಾಗಿರುವ ಜಾಗೆಯ ವಿಷಯ ದಿನದಿಂದ ದಿನಕ್ಕೆ ಹೊಸ ತಿರುವು ಪಡೆಯುತ್ತಿದೆ.

ಮಂಗಳವಾರ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಸಲ್ಲಿಸಿದ ಸಂಘಟನೆಗಳು, ಪಟ್ಟಣದ ಭರಮದೇವರ ವೃತ್ತದ ಬಳಿ ಇರುವ ದೇಸಾಯಿಬಣ ಆಸ್ತಿಯ ಉರ್ದು ಶಾಲೆ ಪಕ್ಕದಲ್ಲಿರುವ ಜಾಗೆಯಲ್ಲಿ 6 ಮಳಿಗೆಗಳನ್ನು ಪುರಸಭೆಯಿಂದ ಯಾವುದೇ ಪರವಾನಗಿ ಇಲ್ಲದೆ ನಿರ್ಮಿಸಿದ್ದಾರೆ. ಕೂಡಲೇ ಅದನ್ನು ತೆರವುಗೊಳಿಸಿ ಅದೇ ಜಾಗದಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲ ವಾಗುವಂತೆ ಗ್ರಂಥಾಲಯ ಅಥವಾ ಅಂಗನವಾಡಿ ನಿರ್ಮಿಸಬೇಕು. ಈ ಕುರಿತಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದ್ದು, ಅಕ್ರಮ ಕಟ್ಟಡವನ್ನು 15 ದಿನದೊಳಗೆ ತೆರವುಗೊಳಿಸದಿದ್ದಲ್ಲಿ ಹಿಂದೂ ಮಹಾ ಗಣಪತಿ ಸೇವಾ ಮಂಡಳಿ ಹಾಗೂ ಸನಾತನ ಹಿಂದೂ ಯುವಕ ಮಂಡಳ ಸದಸ್ಯರಿಂದ ನ್ಯಾಯ ಸಿಗುವವರೆಗೂ ತೀವ್ರ ಹೋರಾಟ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮನವಿ ಸ್ವೀಕರಿಸಿ ಮಾತನಾಡಿ, ಈ ಬಗ್ಗೆ ಸ್ಥಳ ಪರಿಶೀಲನೆ ಮಾಡಲಾಗಿದೆ. ದಾಖಲೆಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಫಕ್ಕೀರೇಶ ಅಣ್ಣಿಗೇರಿ, ಮಂಜು ತಿಮ್ಮಣ್ಣವರ, ನವೀನ ಕುಂಬಾರ, ಅಮಿತ ಗುಡಗೇರಿ, ಸೋಮು ಗೌರಿ, ಫಕ್ಕೀರೇಶ ಬಸವನಾಯ್ಕರ, ಮುತ್ತು ಗೊಜನೂರ, ಹನುಮಂತ ರಾಮಗೇರಿ, ಕಿರಣ ಚಿಲ್ಲೂರ ಮಠ, ವಿಶ್ವ ದಾನಿ, ಮಂಜುನಾಥ ಬಳಗಾನೂರ, ಹಿಂದೂ ಮಹಾಸಭಾ ಗಣಪತಿ ಅಧ್ಯಕ್ಷರು ಸದಸ್ಯರು ಹಾಗೂ ಸನಾತನ ಹಿಂದೂ ಯುವಕ ಮಂಡಳದ ಅಧ್ಯಕ್ಷರು ಸದಸ್ಯರು ಉಪಸ್ಥಿತರಿದ್ದರು.

# ಶ್ರಮಿಕರಿಗೆ ಪೂರಕವಾದ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಪ್ರಧಾನಿ ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದ ಕೇವಲ 1 ತಿಂಗಳಲ್ಲಿ ಅಮೃತ ಕಾಲದ ಬಜೆಟ್ ಮಂಡನೆ ಮಾಡಿರುವದು ಸ್ವಾಗತಾರ್ಹ ಎಂದು ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಪ್ರತಿಕ್ರಿಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಜೆಟ್‌ನಲ್ಲಿ ಗ್ರಾಮೀಣ ಅಭಿವೃದ್ಧಿಗೆ 2.66 ಲಕ್ಷ ಕೋಟಿ, ನಗರ ಪ್ರದೇಶಗಳ ಅಭಿವೃದ್ಧಿಗೆ 10 ಲಕ್ಷ ಕೋಟಿ, ಶಿಕ್ಷಣ ಹಾಗು ಉದ್ಯೋಗಕ್ಕಾಗಿ 1.48 ಲಕ್ಷ ಕೋಟಿ, ಮೂಲ ಸೌಕರ್ಯಕ್ಕಾಗಿ 11 ಲಕ್ಷ ಕೋಟಿ, ಸಣ್ಣ ಕೈಗಾರಿಕೆಗಳಿಗೆ ಸ್ವಯಂ ನಿಧಿ ಯೋಜನೆ, ಬಂಗಾರ-ಬೆಳ್ಳಿ ದರ ಇಳಿಕೆ, ಕಾಶಿ ವಿಶ್ವನಾಥ ದೇವಸ್ಥಾನ ಅಭಿವೃದ್ಧಿ, ದೇಶದಲ್ಲಿ 12 ಹೊಸ ಇಂಡಸ್ಟ್ರಿಯಲ್ ಪಾರ್ಕ್‌ಗಳ ನಿರ್ಮಾಣ, ಪ್ರತಿ ರಾಜ್ಯಗಳಿಗೆ 50 ವರ್ಷ ಬಡ್ಡಿ ರಹಿತ ಸಾಲ, ರೈತರಿಗಾಗಿ ಕಿಸಾನ್ ಕ್ರೆಡಿಟ್ ಕಾರ್ಡ್, ದೇಶದ ಕೈಗಾರಿಕೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು, ಮೊಬೈಲ್-ಚಾರ್ಜರ್ ಬೆಲೆ ಇಳಿಕೆ, ತೆರಿಗೆ ಪದ್ಧತಿ ಮತ್ತಷ್ಟು ಸಡಿಲೀಕರಣ, ಸರಕಾರಿ ನೌಕರರಿಗೆ ಬಹು ದೊಡ್ಡ ಕೊಡುಗೆ ಹಾಗು ರೈತರಿಗೆ, ಯುವಕರಿಗೆ ಹೆಚ್ಚಿನ ಒತ್ತು ನೀಡಿರುವದು, ದೇಶ ಪ್ರಗತಿಯತ್ತ ಸಾಗಲು ಹಲವಾರು ಯೋಜನೆಗಳನ್ನು ತಂದಿರುವದು ಶ್ಲಾಘನೀಯ.

ಇಂದಿನ ಕೇಂದ್ರ ಬಜೆಟ್‌ನಲ್ಲಿ ಅಮೃತ ಕಾಲ ಸೃಷ್ಟಿ ಮಾಡಿದ ದೇಶದ ಪ್ರಧಾನಿ ನರೇಂದ್ರ ಮೋದಿಯವರಿಗೆ, ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್‌ರಿಗೆ ಗದಗ ಜಿಲ್ಲಾ ಬಿಜೆಪಿ ವತಿಯಿಂದ ಅಭಿನಂದನೆಗಳನ್ನು ಅವರು ತಿಳಿಸಿದ್ದಾರೆ.

# ಸಮಗ್ರ ಅಭಿವೃದ್ಧಿಗೆ ಪೂರಕ ಬಜೆಟ್

■ವಿಜಯಸಾಕ್ಷಿ ಸುದ್ದಿ, ರೋಣ



ದೇಶದ ಪ್ರಧಾನಿ ನರೇಂದ್ರ ಮೋದಿಯವರ ಮೂರನೇ ಅವಧಿಯ ಆಡಳಿತದಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್‌ರವರು 7ನೇ ಬಾರಿಗೆ ಐತಿಹಾಸಿಕ ಬಜೆಟ್ ಮಂಡಿಸಿದ್ದಾರೆ ಎಂದು ಭಾಜಪ ರೋಣ ಮಂಡಲ ಅಧ್ಯಕ್ಷ ಮುತ್ತಣ್ಣ ಕಡಗದ ಅಭಿಪ್ರಾಯಪಟ್ಟಿದ್ದಾರೆ.

ತೆರಿಗೆ ನೀತಿಯಲ್ಲಿ ಸರಳೀಕರಣ, ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ 4 ಕೋಟಿ ಮನೆಗಳ ನಿರ್ಮಾಣ, 20 ಲಕ್ಷ ಯುವಕರಿಗೆ ಕೌಶಲ್ಯ ತರಬೇತಿ ಯೋಜನೆ, 1 ಸಾವಿರ ಹೊಸ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪನೆ, ಮುದ್ರಾ ಲೋನ್ 10 ಲಕ್ಷದಿಂದ 20 ಲಕ್ಷಕ್ಕೆ ಏರಿಕೆ, ಕೈಗಾರಿಕಾ ಕಾರಿಡಾರ್ ನಿರ್ಮಾಣ, ಚಿನ್ನ, ಬೆಳ್ಳಿ, ಮೊಬೈಲ್ ಬೆಲೆಗಳ ಇಳಿಕೆಯಾಗಿದೆ.

ಒಟ್ಟಿನಲ್ಲಿ ದೇಶದ ಸಮಗ್ರ ಜನತೆಯ ಹಿತದೃಷ್ಟಿಯ ಜೊತೆಗೆ ಬಲಾಢ್ಯ ಭಾರತ ನಿರ್ಮಿಸಲು ಪೂರಕ ಬಜೆಟ್ ಇದಾಗಿದೆ ಎಂದಿದ್ದಾರೆ.



ಗದಗ ನಗರದ ಬಿ ಮಾನ್ಯತೆ ಪಡೆದಿರುವ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿರುವ ಮನರಂಜನಾ ವಾರದ ನಿಮಿತ್ತ ಮಂಗಳವಾರ ವಿದ್ಯಾರ್ಥಿನಿಯರಿಂದ ಅವಳಿ-ಜವಳಿ ದಿನವನ್ನಾಗಿ ಆಚರಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka